EMAIL : dairyadadaari@gmail.com ಸಂಪುಟ: 01 ಸಂಚಿಕೆ: 105

ಬೆಲೆ ರೂ : 2.00

ರಾಯಚೂರು

ಪುಟ: 4

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಬುಧವಾರ: 01-04-2026


## ಏಪ್ರಿಲ್ 2ರಂದು ತೇಜಸ್ ಕಾರ್ಯಾಗಾರ

ಧೈರ್ಯದ ದಾರಿ

**ರಾಯಚೂರು:** ಭಾರತ ಸರ್ಕಾರ ಉದ್ಯಮ ಮತ್ತು ಅಂತರಿಕ ವ್ಯಾಪಾರ ಉತ್ತೇಜನ ಇಲಾಖೆ, ಸ್ಟಾರ್ಟ್ ಅಪ್ ಇಂಡಿಯಾ ಯೋಜನೆ ಹಾಗೂ ಜಿಲ್ಲಾಡಳಿತ ರಾಯಚೂರು ಇವರು ಸಂಯುಕ್ತಾಶ್ರಯದಲ್ಲಿ ತೇಜಸ್ ಕಾರ್ಯಾಗಾರವನ್ನು ಏಪ್ರಿಲ್ 2ರ ಬೆಳಿಗ್ಗೆ 10.30ಗಂಟೆಗೆ ನಗರದ ಕೃಷಿ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಾಗೃಹದಲ್ಲಿ ಹಮ್ಮಿಕೊಳ್ಳಲಾಗಿದೆ. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ 2ನೇಪುಟಕ್ಕೆ►

## ಕೇಂದ್ರ ಸರ್ಕಾರ ಸೌದೆ ಭಾಗ್ಯ ನೀಡಿದೆ : ಬಿಜೆಪಿ ವಿರುದ್ಧ ಡಿಕೆಶಿ ಕಿಡಿ

**ಬೆಂಗಳೂರು, ಮಾ.31–** ಯುದ್ಧಗಳ ನೆಪವೊಡ್ಡಿ ಕೇಂದ್ರ ಸರ್ಕಾರವು ದೇಶದಲ್ಲಿ ಉಂಟಾಗುತ್ತಿರುವ ಬೆಲೆ ಏರಿಕೆಯ ಸಮಸ್ಯೆಯನ್ನು ಕಡೆಗಣಿಸುತ್ತಿದೆ ಎಂದು ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ. ಪಕ್ಷದ ಕಚೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರದ ವಿದೇಶಾಂಗ ನೀತಿಯ ವೈಫಲ್ಯಗಳಿಂದಾಗಿ ಬಡ ಜನರ ಬದುಕು ದುಸ್ತರವಾಗಿದೆ

ಪ್ರಧಾನಮಂತ್ರಿ ಉಜ್ವಲ ಯೋಜನೆಯಿಂದ ಸೌದೆ ಒಲೆಗೆ ಪರಿವರ್ತನೆಂಯಾಗಬೇಕಾಗಿದೆ. ಅಡುಗೆ ಅನಿಲದ ಕೊರತೆಯಿಂದಾಗಿ ವಿದ್ಯುತ್ ಒಲೆಗಳನ್ನು ಬಳಸಬೇಕಾಗಿದೆ. ರಾಜ್ಯದಲ್ಲಿ ಶೇ. 10ರಷ್ಟು ವಿದ್ಯತ್ ಬೇಡಿಕೆ ಹೆಚ್ಚಾಗಿದೆ. ಸೌದೆ ಲಭ್ಯವಿಲ್ಲದ ನಗರ ಪ್ರದೇಶದಲ್ಲಿ ಅದರ ಬಳಕೆ ಕಷ್ಟವಾಗಿದೆ. ವಾಣಿಜ್ಯ ಬಳಕೆಯ ಗ್ಯಾಸ್‌ನಿಂದ ಕೆಜಿಗೆ 60 ರಿಂದ 115 ರೂ.ಗೆ ಹೆಚ್ಚಳವಾಗಿದೆ. ರೈಲು ಪ್ರಯಾಣ ದರ, ಟೋಲ್ ಶುಲ್ಕವನ್ನು ಹೆಚ್ಚಿಸಲಾಗಿದೆ. ಕೇಂದ್ರ ಸರ್ಕಾರ ಬೆಲೆ ಏರಿಕೆಯ ಯುದ್ಧ ಮಾಡುತ್ತಿದೆ ಎಂದು ಹೇಳಿದರು.

ಅಡುಗೆ ಅನಿಲದ ಸಮರ್ಪಕ ಪೂರೈಕೆ ಇಲ್ಲದೆ ಸಾಮಾನ್ಯ



ಜನರಿಗೆ ಹಾಗೂ ಹೋಟೆಲ್ ಉದ್ಯಮಕ್ಕೆ ಬಹಳ ತೊಂದರೆಯಾಗುತ್ತಿದೆ. ಕೇಂದ್ರ ಸರ್ಕಾರ ನಮಗೆ ಇಂದು ಸೌದೆ ಭಾಗ್ಯ ನೀಡಿದೆ. ಅಡುಗೆ ಅನಿಲದಿಂದ ಹಿಡಿದು ಪೆಟ್ರೋಲ್, ಡೀಸೆಲ್ ಹಾಗೂ ಇನ್ನಿತರ ಎಲ್ಲಾ ಅಗತ್ಯ ವಸ್ತುಗಳ ಬೆಲೆ ಇಂದು ಗಗನಕ್ಕೇರಿದೆ. ಇಂತಹ ಕಷ್ಟದ ದಿನಗಳಲ್ಲಿ ಜನರ ಆರ್ಥಿಕ ಸ್ಥಿತಿಯನ್ನು ಸುಧಾರಿಸಲು ನಮ ಸರ್ಕಾರ ಜಾರಿಗೆ ತಂದ ಗ್ಯಾರಂಟಿ ಯೋಜನೆಗಳು ಜನರಿಗೆ ಆಸರೆಯಾಗಿವೆ ಎಂದರು.

ಇಂದಿನಿಂದ ಟೋಲ್ ದರ ಕೂಡ ಏರಿಕೆಯಾಗಿದೆ. ಈಗಾಗಲೇ ಪೆಟ್ರೋಲ್ ದರ ಏರಿಕೆಯಿಂದ ತತ್ತರಿಸಿರುವ ಜನರಿಗೆ ಕೇಂದ್ರ ಸರ್ಕಾರವು ಇದೀಗ ಮತ್ತೊಂದು ಹೊಸ ಹೊರೆಯನ್ನು ಹೊರಿಸಿದೆ. ಸುಮಾರು 900ಕ್ಕೂ ಹೆಚ್ಚು ಅಗತ್ಯ ಔಷಧಿಗಳ ಬೆಲೆಯನ್ನು ಹೆಚ್ಚಿಸುವ ಮೂಲಕ, ಈ ಬಡ ಜನವಿರೋಧಿ ಸರ್ಕಾರವು ಸಾಮಾನ್ಯ ಜನರ ಬದುಕನ್ನು ಮತ್ತಷ್ಟು ಕಷ್ಟಕ್ಕೆ ದೂಡಿದೆ ಎಂದು ಕಿಡಿ ಕಾರಿದರು.

ಸಂಕಷ್ಟದ ಸಮಯದಲ್ಲಿ ಜನರ ಬದುಕನ್ನು ಆರ್ಥಿಕ ಸವಾಲುಗಳಿಂದ ಹೇಗೆ ಮುಕ್ತಗೊಳಿಸಬೇಕು ಎಂಬ ಯೋಜನೆ ರೂಪಿಸಬೇಕಾದ ಕೇಂದ್ರ ಸರ್ಕಾರವು, ಏಪ್ರಿಲ್ ಒಂದರಿಂದಲೇ ವಿವಿಧ ವಸ್ತುಗಳ ಬೆಲೆ ಏರಿಕೆ ಮಾಡುವ ಮೂಲಕ ಜನರನ್ನು ಏಪ್ರಿಲ್ ಫೂಲ್ ಮಾಡಿದೆ.

ಈ ಮೂಲಕ ಜನಸಾಮಾನ್ಯರನ್ನು ಮತ್ತಷ್ಟು ಸಂಕಷ್ಟಕ್ಕೆ ತಳ್ಳಿದೆ ಎಂದು ತರಾಟೆಗೆ ತೆಗೆದುಕೊಂಡರು.

ಮೋದಿಯವರು ಅಚ್ಛೆ ದಿನಗಳು ಬರುತ್ತವೆ ಎಂದು ಹೇಳಿದ್ದರು. ಏನಾಯಿತು ಆ ಭರವಸೆ ನೀವು ನೀಡಿದ ಆ ಅಚ್ಛೆ ದಿನಗಳು ಈಗ ಎಲ್ಲಿವೆ? ಈಗ ಅಚ್ಛೆ ದಿನಗಳು ಹೋಗಿ ಕಚ್ಚಾ ದಿನಗಳು ಬಂದಿವೆ ಎಂದು ಹೇಳಬೇಕೇ? ಎಂದರು.

## ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಅಕ್ರಮ ಚಟುವಟಿಕೆಗಳಿಗೆ ಬ್ರೇಕ್ ಹಾಕಿ ಕನ್ನಡ ಸೇನೆ ಕರ್ನಾಟಕ ಜಿಲ್ಲಾಧ್ಯಕ್ಷರಾದ ಎಂ ಬಸವರಾಜ್ ಆಗ್ರಹ



ಧೈರ್ಯದ ದಾರಿ

**ರಾಯಚೂರು:** ಜಿಲ್ಲೆಯಾದ್ಯಂತ ಇತ್ತೀಚಿನ ದಿನಗಳಲ್ಲಿ ಕಳ್ಳತನ, ಜೂಜಾಟ, ದರೋಡೆ ಹಾಗೂ ಗಾಂಜಾ ಸೇರಿದಂತೆ ಮಾದಕ ದ್ರವ್ಯಗಳ ಮಾರಾಟ ಎಗ್ಗಿಲ್ಲದೆ ನಡೆಯುತ್ತಿರುವುದಕ್ಕೆ ಕನ್ನಡ ಸೇನೆ ಕರ್ನಾಟಕ ಸಂಘಟನೆ ತೀವ್ರ ಆತಂಕ ವ್ಯಕ್ತಪಡಿಸಿದೆ. ಈ ಕುರಿತು ಸಂಘಟನೆಯ ಜಿಲ್ಲಾ ಸಮಿತಿ ವತಿಯಿಂದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ (ಖಕ) ಮನವಿ ಸಲ್ಲಿಸಿ, ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಯಿತು.

ಪ್ರಮುಖ ಒತ್ತಾಯಗಳು:

ಜಿಲ್ಲೆಯ ವಿವಿಧ ತಾಲ್ಲೂಕುಗಳಾದ ರಾಯಚೂರು, ದೇವದುರ್ಗ, ಅರಕೇರಾ, ಸಿರವಾರ, ಮಾನ್ವಿ, ಲಿಂಗಸೂರು, ಮಸ್ಕಿ ಹಾಗೂ ಸಿಂಧನೂರು ಭಾಗಗಳಲ್ಲಿ ಹಗಲು-ರಾತ್ರಿ ಎನ್ನದೆ ಅಕ್ರಮ ಚಟುವಟಿಕೆಗಳು ನಡೆಯುತ್ತಿವೆ ಎಂದು ಸಂಘಟನೆ ದೂರಿದೆ.

ಮನವಿಯಲ್ಲಿನ ಪ್ರಮುಖ ಅಂಶಗಳು ಇಲ್ಲಿವೆ:

ಗಸ್ತು ಹೆಚ್ಚಳ: ರಾತ್ರಿ ವೇಳೆ ಪೊಲೀಸ್ ಗಸ್ತನ್ನು ತೀವ್ರಗೊಳಿಸಬೇಕು ಮತ್ತು ಕಳ್ಳತನ ಪ್ರಕರಣಗಳು ಹೆಚ್ಚಾಗಿ ನಡೆಯುತ್ತಿರುವ ಪ್ರದೇಶಗಳಲ್ಲಿ ವಿಶೇಷ ನಿಗಾ ವಹಿಸಬೇಕು.

**ಮಾದಕ ದ್ರವ್ಯ ತಡೆ:** ಕಾಲೇಜುಗಳ ಸುತ್ತಮುತ್ತ ಗಾಂಜಾ ಮಾರಾಟ ಮಾಡುವ ಜಾಲದ ವಿರುದ್ಧ ವಿಶೇಷ ಕಾರ್ಯಾಚರಣೆ ನಡೆಸಿ, ಯುವ ಜನತೆ ದಾರಿ ತಪ್ಪುವುದನ್ನು ತಡೆಯಬೇಕು.

**ಜೂಜಾಟಕ್ಕೆ ಕಡಿವಾಣ:** ಬಹಿರಂಗ ಜೂಜಾಟ ಹಾಗೂ ಅಕ್ರಮ ಕ್ಲಬ್‌ಗಳ ಮೇಲೆ ದಾಳಿ ನಡೆಸಿ, ಕಾನೂನು ರೀತ್ಯಾ ಕಠಿಣ ಕ್ರಮ ಕೈಗೊಳ್ಳಬೇಕು.

**ಸಾರ್ವಜನಿಕ ಸುರಕ್ಷತೆ:** ರಸ್ತೆಯಲ್ಲಿ ಮಹಿಳೆಯರು ಮತ್ತು ಸಾರ್ವಜನಿಕರು ಭಯವಿಲ್ಲದೆ ಓಡಾಡುವ ವಾತಾವರಣ ನಿರ್ಮಿಸಬೇಕು.

"ಪೊಲೀಸ್ ಇಲಾಖೆಯು ಈ ಕೂಡಲೇ ಎಚ್ಚೆತ್ತುಕೊಂಡು ಅಕ್ರಮ ದಂಧೆಗಳನ್ನು ಸಂಪೂರ್ಣವಾಗಿ ತಡೆಗಟ್ಟಬೇಕು. ಒಂದು ವೇಳೆ ಸೂಕ್ತ ಕ್ರಮ ಕೈಗೊಳ್ಳದಿದ್ದಲ್ಲಿ, ಜಿಲ್ಲೆಯಾದ್ಯಂತ ಹಾಗೂ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಕನ್ನಡ ಸೇನೆ ಕರ್ನಾಟಕ ವತಿಯಿಂದ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು."

ಎಂ. ಬಸವರಾಜ್, ಜಿಲ್ಲಾಧ್ಯಕ್ಷರು, ಕನ್ನಡ ಸೇನೆ ಕರ್ನಾಟಕ.

ಉಪಸ್ಥಿತರಿದ್ದ ಗಣ್ಯರು: ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾ ಕಾರ್ಯಾಧ್ಯಕ್ಷ ಹನುಮೇಶ್ ನಾಯಕ್ ಮೇಟಿ, ಜಿಲ್ಲಾ ಉಪಾಧ್ಯಕ್ಷರಾದ ಗೋವಿಂದ ಚೌಹಾಣ್, ನಾಗಪ್ಪ, ಶರಣು ಜಿ. ಪವಾರ್, ನಗರ ಘಟಕದ ಅಧ್ಯಕ್ಷ ಮಂಜುನಾಥ್, ಜಿಲ್ಲಾ ಸಹಕಾರ್ಯದರ್ಶಿ ಶಿವರಾಜ್ ಬಡಿಗೇರ್, ಮುಖಂಡರಾದ ತಾಯಪ್ಪ, ನಾಗನಗೌಡ, ರಾಯಪ್ಪ ನಾಯಕ್, ಪರಶುರಾಮ್, ಸಂಗು ಪಾಟೀಲ್, ದೇವರಾಜ್, ಯಮನೂರಪ್ಪ, ಸಂತೋಷ್ ನಾಯಕ್, ಶ್ರೀರಾಮುಲು, ಆಷಣಪ್ಪ, ಬಾಬು ಸೇರಿದಂತೆ ಹಲವು ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಸಿರವಾರ: ಏಪ್ರಿಲ್ 6ರಂದು ಪಟ್ಟಣ ಪಂಚಾಯತ್ ಮಾರುಕಟ್ಟೆ ಹರಾಜು ಪ್ರಕ್ರಿಯೆ

ಧೈರ್ಯದ ದಾರಿ



**ಸಿರವಾರ:** ಸ್ಥಳೀಯ ಪಟ್ಟಣ ಪಂಚಾಯತ್ ವ್ಯಾಪ್ತಿಯ ವಾರದ ಮತ್ತು ದಿನದ ಮಾರುಕಟ್ಟೆಯ ವಾರ್ಷಿಕ ಶುಲ್ಕ ವಸೂಲಾತಿ ಹಕ್ಕಿಗಾಗಿ ಏಪ್ರಿಲ್ 6ರಂದು ಬಹಿರಂಗ ಹರಾಜು ಆಯೋಜಿಸಲಾಗಿದೆ ಎಂದು ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ. ಹರಾಜಿನ ಪ್ರಮುಖ ಮಾಹಿತಿ: ದಿನಾಂಕ: ಏಪ್ರಿಲ್ 6, ಸೋಮವಾರ. ಸಮಯ: ಬೆಳಿಗ್ಗೆ 11:00 ಗಂಟೆಗೆ. ಸ್ಥಳ: ನೂತನ ಪಟ್ಟಣ ಪಂಚಾಯತ್ ಕಾರ್ಯಾಲಯ, ಸಿರವಾರ.ಠೇವಣಿ ವಿವರಗಳು (EMD): ಹರಾಜಿನಲ್ಲಿ ಪಾಲ್ಗೊಳ್ಳುವ ಆಸಕ್ತರು ಈ ಕೆಳಗಿನಂತೆ ಮುಂಗಡ ಠೇವಣಿ ಮೊತ್ತವನ್ನು ಪಾವತಿಸುವುದು ಕಡ್ಡಾಯವಾಗಿದೆ:ವಾರದ ಮಾರುಕಟ್ಟೆ ಹರಾಜು: 50,000 (ಐವತ್ತು ಸಾವಿರ ರೂ.) ದಿನದ ಮಾರುಕಟ್ಟೆ ಹರಾಜು: 25,000 (ಇಪ್ಪತ್ತೈದು ಸಾವಿರ ರೂ.)

**ಪ್ರಮುಖ ಸೂಚನೆಗಳು:** "ಹರಾಜಿನಲ್ಲಿ ಭಾಗವಹಿಸುವ ಬಿಡ್‌ದಾರರು ನಿಗದಿಪಡಿಸಿದ ಠೇವಣಿ ಮೊತ್ತದೊಂದಿಗೆ ತಮ್ಮ ಅಧಿಕೃತ ಗುರುತಿನ ಚೀಟಿಯನ್ನು (ಂಚಿಜhಚಿಚಿಡಿ/ಗಿoಣeಡಿ ಖಆ) ಕಡ್ಡಾಯವಾಗಿ ತರಬೇಕು. ಹರಾಜು ಪ್ರಕ್ರಿಯೆಯು ನಿಗದಿತ ಸಮಯಕ್ಕೆ ಸರಿಯಾಗಿ ಆರಂಭವಾಗಲಿದ್ದು, ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು," ಎಂದು ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಡಾ.ಬಾಬು ಜಗಜೀವನ್ ರಾಮ್ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆ ಪೂರ್ವಭಾವಿಸಭೆ




ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ತಹಶೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ನಡೆದ ವಿವಿಧ ಮಹಾನಿಯರ ಜಯಂತಿಗಳ ಆಚರಣೆಯ ಪೂರ್ವಭಾವಿ ಸಭೆಯಲ್ಲಿ ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ ತಾಲೂಕು ಆಡಳಿತ, ತಾಲೂಕು ಸಮಾಜ ಕಲ್ಯಾಣ ಇಲಾಖೆ ಹಾಗೂ ವಿವಿಧ ಸಮುದಾಯಗಳ ಸಹಭಾಗಿತ್ವದಲ್ಲಿ ಏ.5 ರಂದು ಡಾ.ಬಾಬು ಜಗಜೀವನ್ ರಾಮ್ ಜಯಂತಿ ಹಾಗೂ ಏ.14 ರಂದು ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರ ಜಯಂತಿಯನ್ನು ಶಾಸಕ ಹಂಪಯ್ಯನಾಯಕರವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದ್ದು ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಡಾ.ಬಾಬು ಜಗಜೀವನ್ ರಾಮ್ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಪಟ್ಟಣದ ಪ್ರಮುಖ ಬೀದಿಗಳ ಮೂಲಕ ತಹಶೀಲ್ದಾರ್ ಕಚೇರಿಯ ಆವರಣದಲ್ಲಿನ ವೇದಿಕೆಯವರೆಗೆ ವಿವಿಧ ಜನಪದ ಕಲಾ ತಂಡಗಳೊಂದಿಗೆ ಮೆರವಣಿಗೆ ನಡೆಸಲಾಗುವುದು. ನಂತರ ವೇದಿಕೆಯಲ್ಲಿ ಡಾ.ಬಾಬು ಜಗಜೀವನ್ ರಾಮ್ ರವರ ಕುರಿತು ಹಿರಿಯ ವಕೀಲರಾದ ಯಲ್ಲಪ್ಪ ಬಾದರದಿನ್ನಿ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ರವರ ಜೀವನ ಹಾಗೂ ಸಾಧನೆ ಕುರಿತು ತಾಯಪ್ಪ ಬಿ,ಹೊಸೂರು ರವರಿಂದ ಉಪನ್ಯಾಸ ಹಾಗೂ ಸಮುದಾಯಗಳ ಸಾಧಕರಿಗೆ ತಾಲೂಕಾಡಳಿತ ವತಿಯಿಂಸ ಸನ್ಮಾನ , ಮಕ್ಕಳಿಂದ ಸಾಂಸ್ಕೃತಿ ಕಾರ್ಯಕ್ರಮ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಅಯೋಜಿಸಲಾಗಿದ್ದು ತಾಲೂಕು ಮಟ್ಟದಲ್ಲಿನ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಏ.5 ರಂದು ಡಾ.ಬಾಬು ಜಗಜೀವನ್ ರಾಮ್ ಜಯಂತಿ ಹಾಗೂ ಏ.14 ರಂದು ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರ ಜಯಂತಿಯನ್ನು ಆಚರಿಸಿ ನಂತರ ತಾಲೂಕು ಆಡಳಿತ ವತಿಯಿಂದ ನಡೆಯುವ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಸೂಚಿಸಿದರು.

ದಲಿತ ಪರ ಹೋರಾಟಗಾರರಾದ ಪರಶುರಾಮ ಕುರ್ಡಿ ಮಾತನಾಡಿ ಮಾನ್ವಿಯಲ್ಲಿ ಇದುವರೆಗೂ ಕೂಡ ಡಾ.ಬಾಬು ಜಗಜೀವನ್ ರಾಮ್ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ರವರ ಭವನ ನಿರ್ಮಾಣ ಮಾಡದೆ ಇರುವುದರಿಂದ ಸಾರ್ವಜನಿಕರಿಗೆ ತಮ್ಮ ಕಾರ್ಯಕ್ರಮಗಳನ್ನು ಮಾಡುವುದಕ್ಕೆ ಅಗುತ್ತಿಲ್ಲ ಅದ್ದರಿಂದ ಕೂಡಲೆ ಭವನಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ದತ್ತಾತ್ರೇಯ ವಕೀಲರು ಮಾತನಾಡಿ ಚತುಷ್ಪಥ ರಸ್ತೆ ನಿರ್ಮಾಣ ಸಂಸ್ಥೆಯವರು ಮುಖ್ಯ ರಸ್ತೆಯಲ್ಲಿ ಬರುವ ಗ್ರಾಮಗಳಲ್ಲಿನ ಡಾ.ಬಿ.ಆರ್.ಅಂಬೇಡ್ಕರ್ ವೃತ್ತಗಳಲ್ಲಿನ ಭಾವಚಿತ್ರಗಳನ್ನು ಸ್ಥಳಾಂತರಿಸಿದು ಇದುವರೆಗೂ ಕೂಡ ಪುನಃ ಭಾವಚಿತ್ರಗಳನ್ನು ಅಳವಡಿಸಿಲ್ಲದೆ ಇರುವುದರಿಂದ ಜಯಂತಿಗಳನ್ನು ಆಚರಿಸುವುದಕ್ಕೆ ಸಾಧ್ಯವಾಗದೆ ಇರುವುದರಿಂದ ಕೂಡಲೆ ಭಾವಚಿತ್ರಗಳನ್ನು ಅಳವಡಿಸುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳ ಬೇಕು ಎಂದು ಒತ್ತಾಯಿಸಿದರು. ಪೂರ್ವಭಾವಿ ಸಭೆಯಲ್ಲಿ ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಸೈರಾಬಾನು ಮಾತನಾಡಿದರು. ತಾಲೂಕು ಪಂಚಾಯಿತಿ ಇ.ಓ. ಖಾಲಿದ್ ಅಹ್ಮದ್, ತಾ.ಅರೋ ಗ್ಯಧಿಕಾರಿ ಡಾ.ಶರಣಬಸವರಾಜು, ಪಿ.ಐ.ಸೋಮಶೇಖರ ಎಸ್. ಕೆಂಚರೆಡ್ಡಿ, ಪ.ಪಂಗಡ ಕಲ್ಯಾಣಾಧಿಕಾರಿ ಮಹಾಲಿಂಗಪ್ಪ ಇಂಗಳದಾಳ್, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಭಾಗಯ್ಯ ನಾಯಕ, ಹಿರಿಯ ದಲಿತ ಮುಖಂಡರಾದ ಹನುಮಂತಕೋಟೆ, ಶಿವರಾಜ ಉಮಳಿ ಹೊಸೂರು, ಬಸವರಾಜ ನಕ್ಕುಂದಿ, ಕಾಶಿನಾಥ ಕುರ್ಡಿ, ಬುಡ್ಡಪ್ಪನಾಯಕ, ಪಿ.ರವಿಕುಮಾರ,ಸುಂದರ್, ಸೇರಿದಂತೆ ಇನ್ನಿತರರು ಇದ್ದರು.

## ವಿದ್ಯಾಭಾರತಿ ಶಾಲೆ ಪೋತ್ನಾಳ 8ನೇ ತರಗತಿ ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭ

ಧೈರ್ಯದ ದಾರಿ

**ಮಾನ್ವಿ ;**ತಾಲೂಕಿನ ಪೊಟ್ನಳ್ಳಿ ಗ್ರಾಮದ ವಿದ್ಯಾಭಾರತಿ ಶಾಲೆಯಲ್ಲಿ ಇಂದು 8ನೇ ತರಗತಿ ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು, ಇದೇ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಮಾನ್ವಿ ತಾಲೂಕ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷರಾದ ರಾಜ ಸುಭಾಷ್ ಚಂದ್ರ ನಾಯಕ್ ಮಕ್ಕಳು ವಿದ್ಯಾಭ್ಯಾಸದಲ್ಲಿ ಜಯಶೀಲರಾಗಬೇಕಾದರೆ ನಿರಂತರ ಪರಿಶ್ರಮದ ಕಲಿಕೆಯಿಂದ ಯಶಸ್ಸು ಕಾಣಲು ಸಾಧ್ಯ ಮತ್ತು ತಾವುಗಳು ಶಿಕ್ಷಣದ ಜೊತೆಗೆ ಮೌಲ್ಯಗಳನ್ನು ಕೂಡ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಮಾತನಾಡಿದರು. ಯುಕೆಜಿ ಮಕ್ಕಳಿಗೆ ಗ್ರಾಜುಯೇಷನ್ ಸರ್ಟಿಫಿಕೇಟ್ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾದ ಈರಪ್ಪ ಬಜಾರ್ ಪೋತ್ನಾಳ್, ಸೈಯದ್ ಅಹ್ಮದ್ ಹುಸೇನಿ ಮತವಾಲೆ ಸಾಹೇಬ್ ಮಾನ್ವಿ, ಶಾಲೆಯ ಅಧ್ಯಕ್ಷರಾದ ರಾಜು ತಾಳಿಕೋಟಿ,




ಕಾರ್ಯದರ್ಶಿಗಳಾದ ಶ್ರೀಮತಿ ಸಾರ ಆರ್ ತಾಳಿಕೋಟಿ ಶಿಕ್ಷಕ ವೃಂದದವರು ಪಾಲಕರು ಮತ್ತು ವಿದ್ಯಾ ವಿಧ್ಯಾರ್ಥಿಗಳು ಹಾಜರಿದ್ದರು. ಶಾಲಾ ಮಕ್ಕಳು ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು ನರ್ಸರಿ ಮತ್ತು ಏಳನೇ ತರಗತಿ ಮಕ್ಕಳಿಂದ ಸಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಡಲಾಯಿತು.

## ಭಗವಾನ್ ಮಹಾವೀರರ ಶಾಂತಿ, ಸೌಹಾರ್ದತೆ ಸಂದೇಶಗಳು ಇಂದಿಗೂ ಪ್ರಸ್ತುತ: ಡಾ.ಹಂಪಣ್ಣ ಸಜ್ಜನ್

ಧೈರ್ಯದ ದಾರಿ

**ರಾಯಚೂರು:** ಭಗವಾನ್ ಮಹಾವೀರರು ತಮ್ಮ ಜೀವಿತಾವಧಿಯಲ್ಲಿ ಪರಿಪಾಲನೆ ಮಾಡಿದ ಮತ್ತು ಇಡೀ ಜಗತ್ತಿಗೆ ತಿಳಿಸಿಕೊಟ್ಟ ಶಾಂತಿ, ಸೌಹಾರ್ದತೆ ಮತ್ತು ಸಹೋದರತೆ ಸಂದೇಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್ ಅವರು ಹೇಳಿದರು.



ಮಾರ್ಚ್ 31ರ ಮಂಗಳವಾರ ದಂದು ನಗರದ ಸುಮತಿನಾಥ ಜೈನ ಶ್ವೇತಾಂಬರ ಮೂರ್ತಿ ಪೂಜಕ ಆರಾಧನಾ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಡೆದ ಭಗವಾನ್ ಶ್ರೀ ಮಹಾವೀರ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಅಹಿಂಸಾ ತತ್ವ ಪ್ರತಿಪಾದಿಸಿದ

ಮಹಾವೀರರು ಸೇರಿದಂತೆ ಅನೇಕ ಮಹನೀಯರು ಸಮಾಜಕ್ಕೆ ತಮ್ಮದೇ ಆದ ಕೊಡುಗೆ ಮತ್ತು ಜೀವನ ಸಂದೇಶ ನೀಡಿದ್ದಾರೆ. ಅಂತಹ ಮಹನೀಯರ ಜಯಂತಿಗಳು ಕೇವಲ ಆಚರಣೆಗಳಿಗೆ ಮಾತ್ರ ಸೀಮಿತವಾಗದೇ, ಅವರ ತತ್ವಾದರ್ಶಗಳು 2ನೇಪುಟಕ್ಕೆ

ಮೊದಲನೇ ಪುಟದಿಂದ

## ಭಗವಾನ್ ಮಹಾವೀರರ ಶಾಂತಿ, ಸೌಹಾರ್ದತೆ ಸಂದೇಶಗಳು ಇಂದಿಗೂ ಪ್ರಸ್ತುತ: ಡಾ.ಹಂಪಣ್ಣ ಸಜ್ಜನ್

ಜೀವನದಲ್ಲಿ ಅಳವಡಿಸಿಕೊಂಡಾಗ ಮಹನೀಯರಿಗೆ ಗೌರವ ಸಲ್ಲಿಸಿದಂತಾಗುತ್ತದೆ ಎಂದು ಹೇಳಿದರು. ಈ ವೇಳೆ ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಕುಮಾರಸ್ವಾಮಿ ಅವರು ಮಾತನಾಡಿ, ಕರುಣೆ, ಅಹಿಂಸೆ, ಸಮಾನತೆ ಸೇರಿದಂತೆ ಭಗವಾನ್ ಮಹಾವೀರರು ಬೋಧನೆ ಮಾಡಿದ ಅಂಶಗಳನ್ನು ಜೀವನದಲ್ಲಿ ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು. ನಾವು ಬದುಕಬೇಕು, ಬೇರೆಯವರನ್ನು ಬದುಕಲು ಬಿಡಬೇಕೆಂಬುದನ್ನು ಪ್ರತಿಯೊಬ್ಬರೂ ಪಾಲಿಸಬೇಕು. ಮಹಾವೀರರು ತಿಳಿಸಿದ ಸಂದೇಶಗಳು ಕೇವಲ ಜೈನ ಧರ್ಮಕ್ಕೆ ಮಾತ್ರ ಸೀಮಿತವಲ್ಲ; ಅವರ ಸಂದೇಶಗಳಿಂದ ಇಡೀ ಮನುಕುಲದ ಉದ್ಧಾರವಾಗುತ್ತದೆ ಎಂದರು.

ಈ ವೇಳೆ ಉಪನ್ಯಾಸಕರಾಗಿ ರಾಯಚೂರಿನ ಪ್ರೇಮಲತಾ ಅವರು ಮಾತನಾಡಿ, ಜಗತ್ತಿನ ಜನರು ಅನುಭವಿಸುತ್ತಿದ್ದ ಅನೇಕ ತೊಂದರೆಗಳಿಗೆ ಪರಿಹಾರ ನೀಡಿದ ಅನೇಕ ಮಹನೀಯರಲ್ಲಿ ಮಹಾವೀರರು ಕೂಡ ಒಬ್ಬರಾಗಿದ್ದಾರೆ. ಜಗತ್ತನ್ನು ಉತ್ತಮ ರೀತಿಯಲ್ಲಿ ಕೊಂಡೊಯ್ಯಲು ತಮ್ಮ ಬದುಕನ್ನೇ ಮುಡುಪಾಗಿಟ್ಟಿದ್ದಾರೆ. ಜೊತೆಗೆ ಧಾರ್ಮಿಕ ಕ್ರಾಂತಿಯನ್ನು ಮೂಡಿಸಿದವರಲ್ಲಿ ಭಗವಾನ್ ಮಹಾವೀರರು ಕೂಡ ಒಬ್ಬರಾಗಿದ್ದಾರೆ ಎಂದು ಹೇಳಿದರು.

ಜಿಲ್ಲಾಧಿಕಾರಿಗಳಿಂದ ಮೆರವಣಿಗೆ ಚಾಲನೆ: ಭಗವಾನ್ ಮಹಾವೀರ ಭಾವಚಿತ್ರ ಮೆರವಣಿಗೆಗೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಚಾಲನೆ ನೀಡಿದರು.

ಜೈನ್ ಭವನದಿಂದ ಆರಂಭವಾದ ಮೆರವಣಿಗೆಯಲ್ಲಿ ಸಮಾಜದ ನೂರಾರು ಜನತೆ ಪಾಲ್ಗೊಂಡು ಶಾಂತಿ, ಸಹಿಷ್ಣುತೆ ಹಾಗೂ ಅಹಿಂಸೆಯ ಸಂದೇಶ ಸಾರಿದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರ ಸ್ವಾಮಿ, ರಾಯಚೂರು ತಹಶೀಲ್ದಾರ್ ಸುರೇಶ ವರ್ಮ, ರಾಯಚೂರು ಮಹಾನಗರ ಪಾಲಿಕೆ ಸಮಿತಿ ಕಾರ್ಯದರ್ಶಿ ಕೃಷ್ಣಾ ಶಾವಂತಗೇರಾ, ಸಮಾಜದ ಪ್ರಮುಖರಾದ ಪ್ರಕಾಶ, ಕಿಶೋರ್, ಮಹಾವೀರ ಹರದರ, ಪ್ರಖರಾಜ, ಅಶ್ವಿನ ಭಾಟಿಯಾ, ಮೋಹನಲಾಲ್, ರಂಜಿತ್ ಕಟಾರಿಯಾ, ರಾಜುಭಾಯಿ ದೇಸಾಯಿ, ಮನ್ನೂಬಾಯಿ, ಅಶೀಕ ಲೋಧ್ರಾ ಸೇರಿದಂತೆ ಇತರರು ಇದ್ದರು.

ದಂಡಪ್ಪ ಬಿರಾದಾರ್ ನಿರೂಪಿಸಿದರು. ಅಶೋಕ ಕುಮಾರ್ ಜೈನ್ ವಂದಿಸಿದರು.

## ಏಪ್ರಿಲ್ 2ರಂದು ತೇಜಸ್ ಕಾರ್ಯಾಗಾರ

ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲ ಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್ ಅವರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಭಾತರ ಸರ್ಕಾರದ ಡಿಪಿಐಐಟಿ ನಿರ್ದೇಶಕರಾದ ಡಾ.ಸುಮಿತ್ ಜರನಗಲ್, ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ.ಎಂ.ಹನುಮಂತಪ್ಪ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಶಿವಾನಂದ ಕೆಳಗಿನಮನಿ, ಐಐಐಟಿ ರಾಯಚೂರು ನಿರ್ದೇಶಕರಾದ ಪ್ರೊ.ಹರೀಶ್ ಕುಮಾರ್ ಸರ್ದಾನಾ ಅವರು ಭಾಗಿಯಾಗಲಿದ್ದಾರೆ.

ಗೌರವಾನ್ವಿತ ಆಹ್ವಾನಿತರಾಗಿ ಶಿಲ್ಪಾ ಮೆಡಿಕೇರ್ ಲಿಮಿಟೆಡ್ ಅಧ್ಯಕ್ಷರಾದ ವಿಷ್ಣುಕಾಂತ ಭುತಡ, ರಾಸಾಯನಿಕ ತಯಾರಿಕ ಸಂಘದ ಅಧ್ಯಕ್ಷರಾದ ಡಾ.ರಮೇಶ, ರೈಸ್ ಮಿಲ್ಲರ್ಸ್ ಅಸೋಸಿಯೇಷನ್ ಅಧ್ಯಕ್ಷರಾದ ಸಾವಿತ್ರಿ ಪುರುಷೋತ್ತಮ, ಕಾಟನ್ ಮಿಲ್ಲರ್ಸ್ ಅಸೋಸಿಯೇಷನ್ ಅಧ್ಯಕ್ಷರಾದ ವಿ. ಲಕ್ಷ್ಮೀಕಾಂತರೆಡ್ಡಿ, ಜಿಲ್ಲಾ ವಾಣಿಜ್ಯೋದ್ಯಮಿಗಳ ಸಂಘದ ಎಸ್. ಕಮಲ್ ಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಎಸ್ಸೆಸ್ಸೆಲ್ಸಿ ತೃತೀಯ ಭಾಷೆ ಪರೀಕ್ಷೆಗೆ 682 ವಿದ್ಯಾರ್ಥಿಗಳು ಗೈರು

**ರಾಯಚೂರು:**ಜಿಲ್ಲೆಯಲ್ಲಿ ಮಾರ್ಚ್ 31ರ ಮಂಗಳವಾರ 101 ಪರೀಕ್ಷೆ ಕೇಂದ್ರಗಳಲ್ಲಿ ನಡೆದ ತೃತೀಯ ಭಾಷೆ ವಿಷಯದಲ್ಲಿ ಒಟ್ಟು 29,785 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 682 ವಿದ್ಯಾರ್ಥಿಗಳು ಗೈರಾಗಿದ್ದಾರೆ.

ಜಿಲ್ಲೆಯ ದೇವದುರ್ಗ ತಾಲ್ಲೂಕಿನಲ್ಲಿ 3964 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 86 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಲಿಂಗಸುಗೂರು ತಾಲ್ಲೂಕಿನಲ್ಲಿ 6036 ಹಾಜರಾಗಿ 110 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಮಾನ್ವಿ ತಾಲ್ಲೂಕಿನಲ್ಲಿ 5360 ವಿದ್ಯಾರ್ಥಿಗಳು ಹಾಜರಾಗಿ 165 ವಿದ್ಯಾರ್ಥಿಗಳು ಗೈರಾಗಿದ್ದಾರೆ. ರಾಯಚೂರು ತಾಲ್ಲೂಕಿನಲ್ಲಿ 8862 ಹಾಜರಾಗಿದ್ದು 235 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಸಿಂಧನೂರು ತಾಲ್ಲೂಕಿನಲ್ಲಿ 5563 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 86 ವಿದ್ಯಾರ್ಥಿಗಳು ಗೈರಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏಪ್ರಿಲ್ 2ರಂದು ಪೊಲೀಸ್ ಧ್ವಜ ದಿನಾಚರಣೆ

**ರಾಯಚೂರು:** ಇಲ್ಲಿನ ಪೊಲೀಸ್ ಇಲಾಖೆಯಿಂದ ಪೊಲೀಸ್ ಧ್ವಜ ದಿನಾಚರಣೆಯು ಏಪ್ರಿಲ್ 2ರ ಬೆಳಿಗ್ಗೆ 8 ಗಂಟೆಗೆ ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಮುಖ್ಯ ಅತಿಥಿಗಳಾಗಿ ನಿವೃತ್ತ ಆರಕ್ಷಕ ನಿರೀಕ್ಷಕರಾದ ಬಸವರಾಜ ಅವರು ಭಾಗಿಯಾಗಲಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಸ್.ಜೆ.ಕುಮಾರಸ್ವಾಮಿ ಉಪಸ್ಥಿತರಿರುವರು ಎಂದು ಪೊಲೀಸ್ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಸಿಂಧನೂರು ನಗರಸಭೆ ವತಿಯಿಂದ ವಿಮೆ ಮಾಡಿಸಲು ಅರ್ಜಿ ಆಹ್ವಾನ

**ರಾಯಚೂರು:** ಜಿಲ್ಲೆಯ ಸಿಂಧನೂರು ನಗರಸಭೆ ವತಿಯಿಂದ 2024-25ನೇ ಸಾಲಿನ ಶೇ.5 ರ ಯೋಜನೆಯ ನಗರಸಭೆ ನಿಧಿ ಅನುದಾನದಡಿ ಜೀವ ವಿಮಾ/ಆರೋಗ್ಯ ಯೋಜನೆಯ ವಾರ್ಷಿಕ ಪ್ರೀಮಿಯಂ ಕಂತುಗಳನ್ನು ವಿಕಲಚೇತನರ ಜನರಿಗೆ ವಿಮೆಯನ್ನು ಮಾಡಿಸಲು ಅಥವಾ ನವೀಕರಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಶೇ.5 ಯೋಜನೆಗಳಿಗೆ ಕಾಯ್ದಿರಿಸಲಾದ ಅನುಷ್ಠಾನಕ್ಕಾಗಿ ವೈಯಕ್ತಿಕ ಚಟುವಟಿಕೆಗಳ ಪೂರ್ಣ ವಿವರದ ಪ್ರಕಟಣೆಯನ್ನು ನಗರಸಭೆ ಕಾರ್ಯಾಲಯ ನೋಟೀಸ್ ಫಲಕದಲ್ಲಿ ಲಗತ್ತಿಸಿದ್ದು. ಹಾಗೂ ಈ ಸಂಬಂದ ವೆಬ್‌ಸೈಟ್ ˌttp://www.sindhanurcity.mrc.gov.in/ ನಲ್ಲಿ ಈ ಮಾಹಿತಿಯನ್ನು ಡೌನ್‌ಲೋಡ್ ಮಾಡಿಕೊಂಡು ವಿವರ ಪಡೆದುಕೊಳ್ಳಬಹುದು. ಆಸಕ್ತ ಅರ್ಹ ಫಲಾನುಭವಿಗಳು ವೈಯಕ್ತಿಕ ಚಟುವಟಿಕೆವಾರು ಮುಂದೆ ತಿಳಿಸಿರುವ ಅಗತ್ಯ ಎಲ್ಲಾ ದಾಖಲೆಗಳನ್ನು ಗೆಜೆಟೆಡ್ ಅಧಿಕಾರಿಗಳ ದೃಢೀಕರಣದೊಂದಿಗೆ ಏಪ್ರಿಲ್ 07ರ 5.30ರೊಳಗಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಕೊನೆಯ ದಿನಾಂಕ ಮೀರಿ ಬಂದಂತಹ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಪ್ರಕಟಣೆಯಲ್ಲಿನ ಪ್ರಚೂರಪಡಿಸಲಾದ ವೈಯ್ಯಕ್ತಿಕ ಚಟುವಟಿಕೆಗಳ ಯೋಜನೆಗಳ ಬಗ್ಗೆ ಸಮರ್ಪಕವಾಗಿ ತಿಳಿದುಕೊಂಡು ಅರ್ಜಿಗಳನ್ನು ಸಲ್ಲಿಸಬೇಕು. ಅರ್ಜಿ ಸಲ್ಲಿಸುವ ಫಲಾನುಭವಿಗಳು ಕುಟುಂಬದ ಆದಾಯ ಕುರಿತು ಹಾಗೂ ಇತರ ಯಾವುದೇ ದಾಖಲಾತಿಗಳ ತಪ್ಪು ಮಾಹಿತಿ ನೀಡಿ ಈ ಯೋಜನೆಯಡಿ ಸೌಲಭ್ಯವನ್ನು / ಸಹಾಯಧನವನ್ನು ಪಡೆದಿದ್ದು ಕಂಡು ಬಂದಲ್ಲಿ ತಪ್ಪು ನಿರೂಪಣೆ ಮೇರೆಗೆ ಪಡೆಯಲಾದ ಸೌಲಭ್ಯ/ಸಹಾಯಧನದ ಮೊತ್ತವನ್ನು ದಂಡ ಸಮೇತ ವಸೂಲಿಸಿ, ತಮ್ಮ ವಿರುದ್ಧ ಕಾನೂನು ಕ್ರಮ ಜರುಗಿಸಲಾಗವುದು, ಆದ್ದರಿಂದ ಅರ್ಹ ಫಲಾನುಭವಿಗಳು ಮಾತ್ರ ಅರ್ಜಿ ಸಲ್ಲಿಸಿ ಸೌಲಭ್ಯಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿಯುಕೆಯಲ್ಲಿ 'ಸರಕು ಮತ್ತು ಸೇವಾ ತೆರಿಗೆ' ಕುರಿತ ಒಂದು ದಿನದ ಸಮ್ಮೇಳನ




**ಕಲಬುರಗಿ,ಮಾ.31-**"ಜಿಎಸ್‌ಟಿ ಸರ್ಕಾರಕ್ಕೆ ಆದಾಯವನ್ನು ಹೆಚ್ಚಿಸುವ ಮೂಲಕ, ವ್ಯಾಪಾರ ಸಂಸ್ಥೆಗಳಿಗೆ ವ್ಯವಹಾರ ಮಾಡುವ ಸುಲಭತೆಯನ್ನು ಸುಧಾರಿಸುವ ಮೂಲಕ ಮತ್ತು ಗ್ರಾಹಕರಿಗೆ ತೆರಿಗೆ ದರವನ್ನು ಕಡಿಮೆ ಮಾಡುವ ಮೂಲಕ ಸಹಾಯ ಮಾಡಿದೆ" ಎಂದು ನವದೆಹಲಿಯ ಭಾರತ ಸರ್ಕಾರದ ಐಎಸ್‌ಡಿಟಿ ಮತ್ತು ಸಿಇಎ ಮಾಜಿ ನಿರ್ದೇಶಕ ಸಿಎಚ್ ವಿ ಸಾಯಿ ಪ್ರಸಾದ ಹೇಳಿದರು.

ಅವರು ಧಾರವಾಡದ ಬಹುಶಿಸ್ತೀಯ ಸಂಶೋಧನಾ ಕೇಂದ್ರದ (ಸಿಎಂಡಿಆರ್) ಸಹಯೋಗದೊಂದಿಗೆ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಆರ್ಥಿಕ ಅಧ್ಯಯನ ಮತ್ತು ಯೋಜನಾ ವಿಭಾಗ ಮತ್ತು ವಾಣಿಜ್ಯ ವಿಭಾಗವು ಸೋಮವಾರ ಆಯೋಜಿಸಿದ್ದ "ಜಿಎಸ್‌ಟಿ: ಜನರಿಗೆ, ವ್ಯವಹಾರಕ್ಕೆ ಮತ್ತು ಸರ್ಕಾರಕ್ಕೆ ಪ್ರಯೋಜನಗಳು ಮತ್ತು ವಿಕಸಿತ ಭಾರತ-2047ರ ಕಡೆಗೆ ಭಾರತದ ಪ್ರಯಾಣ" ಸಮ್ಮೇಳನದಲ್ಲಿ ಮುಖ್ಯ ಭಾಷಣ ಮಾಡುತ್ತಿದ್ದರು. ಜಿಎಸ್‌ಟಿಯ ಪ್ರಯೋಜನಗಳ ಕುರಿತು ಮಾತನಾಡಿದ ಅವರು, "ಜಿಎಸ್‌ಟಿ ಕ್ಯಾಸ್ಕೇಡಿಂಗ್ ತೆರಿಗೆಗಳನ್ನು ಕಡಿಮೆ ಮಾಡಿದೆ, ಇದು ಬೆಲೆಗಳಲ್ಲಿ ಒಟ್ಟಾರೆ ಕಡಿತಕ್ಕೆ ಕಾರಣವಾಗಿದೆ, ಇದು ಒಂದೇ ಸಾಮಾನ್ಯ ರಾಷ್ಟ್ರೀಯ ಮಾರುಕಟ್ಟೆಯನ್ನು ಸೃಷ್ಟಿಸಿದೆ, ಇದು ಸಣ್ಣ ತೆರಿಗೆದಾರರಿಗೆ ಪ್ರಯೋಜನವನ್ನು ನೀಡಿದೆ, ಇದು ಮಾನವ ರಹಿತ ಎಲೆಕ್ಟ್ರಾನಿಕ್ ತೆರಿಗೆ ವ್ಯವಸ್ಥೆಯನ್ನು ಪರಿಚಯಿಸಿದೆ, ಇದು ತೆರಿಗೆ ಆಡಳಿತವನ್ನು ಸರಳಗೊಳಿಸಿದೆ, ತೆರಿಗೆಗಳ ಸಂಖ್ಯೆಯನ್ನು ಕಡಿಮೆ ಮಾಡಿದೆ ಮತ್ತು ಇದು ದೇಶೀಯ ಕೈಗಾರಿಕೆಗಳನ್ನು ರಕ್ಷಿಸಿದೆ" ಎಂದು ಹೇಳಿದರು.

ಕುಲಸಚಿವರಾದ ಪ್ರೊ. ಆರ್ ಆರ್ ಬಿರದಾರ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿ "ಒಂದು ರಾಷ್ಟ್ರ, ಒಂದು ತೆರಿಗೆ, ಒಂದು ಮಾರುಕಟ್ಟೆ ಸ್ಥಾಪಿಸುವ ಉದ್ದೇಶದಿಂದ 2017ರಿಂದ ಕೇಂದ್ರ ಮತ್ತು ರಾಜ್ಯಗಳ 23 ಪರೋಕ್ಷ ತೆರಿಗೆಗಳನ್ನು ಒಗ್ಗೂಡಿಸಿ ಸರಕು ಮತ್ತು ಸೇವಾ ತೆರಿಗೆ (ಉಖಖಿ)ಯನ್ನು ಜಾರಿಗೆ ತರಲಾಯಿತು.

ನಂತರ ಉಖಖಿ ಸುಧಾರಣೆ 2.0 ಪರಿಚಯಿಸಿ, ತೆರಿಗೆ ದರಗಳನ್ನು 0%, 5%, 18% ಮತ್ತು 40% ಎಂಬಂತೆ ಪುನರ್‌ರಚಿಸಲಾಯಿತು. ಇದರ ಉದ್ದೇಶ ತೆರಿಗೆ ಭಾರವನ್ನು ಕಡಿಮೆ ಮಾಡುವುದು, ಕೊಳ್ಳುವ ಶಕ್ತಿಯನ್ನು

ಹೆಚ್ಚಿಸುವುದು ಮತ್ತು ಕುಟುಂಬಗಳ ಅನುಭೋಗ ವೆಚ್ಚವನ್ನು ಹೆಚ್ಚಿಸುವುದು. ಅದೇ ಸಮಯದಲ್ಲಿ, ಸರಪಳಿ ಪರಿಣಾಮ (cascading effect) ಕಡಿಮೆ ಮಾಡಿ, ಉತ್ಪಾದನಾ ವೆಚ್ಚವನ್ನು ಇಳಿಸಿ, ಉತ್ಪಾದನಾ ದಕ್ಷತೆಯನ್ನು ಹೆಚ್ಚಿಸುವುದರ ಮೂಲಕ "ವಿಕಸಿತ ಭಾರತ 2047" ಕನಸನ್ನು ಸಾಧಿಸುವುದಾಗಿದೆ.

"GST ಸುಧಾರಣೆ 2.0 ಪರಿಚಯದ ನಂತರ ಗ್ರಾಹಕರ ವಿಶ್ವಾಸ ಸೂಚ್ಯಂಕ (CCI) ಏರಿಕೆಯಾಗಿದೆ. ಇದು ಪ್ರಸ್ತುತ ಆರ್ಥಿಕ ಪರಿಸ್ಥಿತಿ, ಉದ್ಯೋಗಾವಕಾಶಗಳು, ಆದಾಯ ಗಳಿಸುವ ಸಾಮರ್ಥ್ಯ, ಗೃಹ ಬಳಕೆಯ ವೆಚ್ಚ ಮತ್ತು ಬೆಲೆಗಳ ಇಳಿಕೆಯಲ್ಲಿ ಸುಧಾರಣೆ ಕಂಡುಬಂದಿದೆ ಎಂಬುದನ್ನು ಸೂಚಿಸುತ್ತದೆ. ಹಾಗೆಯೇ, ಖರೀದಿ ವ್ಯವಸ್ಥಾಪಕರ ಸೂಚ್ಯಂಕ (PMI) ಕೂಡ ಉತ್ತಮಗೊಂಡಿದೆ. ಇದರಿಂದ ಹೊಸ ಸರಕು ಆದೇಶಗಳಲ್ಲಿ ಏರಿಕೆ, ಉತ್ಪಾದನೆ ಹೆಚ್ಚಳ, ಉದ್ಯೋಗ ಸೃಷ್ಟಿ, ಪೂರೈಕೆದಾರರ ವಿತರಣೆ ಹಾಗೂ ಸರಕುಗಳ ಸಂಗ್ರಹ ಮಟ್ಟಗಳಲ್ಲಿ ಸುಧಾರಣೆ ಕಂಡುಬಂದಿದೆ ಎಂಬುದು ಸ್ಪಷ್ಟವಾಗುತ್ತದೆ. ಇದರ ಜೊತೆಗೆ, GST ದರಗಳಲ್ಲಿ ಇಳಿಕೆಯಿಂದ ಉತ್ಪಾದನಾ ವೆಚ್ಚ ಕಡಿಮೆಯಾಗಿದ್ದು, ಸರಕು ಮತ್ತು ಸೇವೆಗಳ ಸರಬರಾಜು ಹೆಚ್ಚಾದ ಕಾರಣ ಸಾಮಾನ್ಯ ಬೆಲೆಗಳ ಮಟ್ಟವೂ ಇಳಿಕೆಯಾಗಿದೆ" ಎಂದು ಅವರು ಹೇಳಿದರು.

"ಆರ್ಥಿಕ ವ್ಯವಸ್ಥೆಯ ಪ್ರಮುಖ ಅಂಶಗಳಾದ ಬೇಡಿಕೆ ಮತ್ತು ಪೂರೈಕೆಯ ನಡುವೆ ಸಮತೋಲನ ಸಾಧಿಸುವುದು ಗ್ರಾಹಕರು ಮತ್ತು ಉತ್ಪಾದಕರ ಹಿತಾಸಕ್ತಿಯನ್ನು ಕಾಪಾಡಲು ಅತ್ಯಂತ ಅಗತ್ಯವಾಗಿದೆ. ಈ ಸಮತೋಲನವನ್ನು ಉಖಖಿ ಸುಧಾರಣೆ 2.0 ಮೂಲಕ ಸಾಧಿಸಲಾಗಿದ್ದು, 2047ರೊಳಗೆ ವಿಕಸಿತ ಭಾರತದ ಗುರಿಯನ್ನು ಸಾಧಿಸಲು ಇದು ಭದ್ರವಾದ ನೆಲೆಯಾಗಿದೆ" ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸ್ಕೂಲ್ ಆಫ್ ಬಿಸಿನೆಸ್ ಸ್ಟಡೀನ ಡೀನ್ ಪ್ರೊ ಪಾಂಡುರಂಗ ಪತ್ತಿ,&ಡಣಾಂಣ;ತೆರಿಗೆ ವ್ಯವಸ್ಥೆಗಳು ವ್ಯವಹಾರ ಪರಿಸರದ ಮೇಲೆ ನೇರ ಪ್ರಭಾವ ಬೀರುತ್ತವೆ. ಜಿಎಸ್‌ಟಿ ಸುಧಾರಣೆಗಳು ಕಾರ್ಯಾಚರಣೆಯ ದಕ್ಷತೆಯನ್ನು ಸುಧಾರಿಸುವಲ್ಲಿ, ವಹಿವಾಟು ವೆಚ್ಚವನ್ನು ಕಡಿಮೆ ಮಾಡುವಲ್ಲಿ ಮತ್ತು ಸ್ಪರ್ಧಾತ್ಮಕತೆಯನ್ನು ಬಲಪಡಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ. ಬೆಲೆಗಳನ್ನು ಕಡಿಮೆ ಮಾಡಲು ಮತ್ತು ಬೇಡಿಕೆಯನ್ನು ಹೆಚ್ಚಿಸಲು, ಎಂಎಸ್‌ಎಂಇಗಳನ್ನು ಬೆಂಬಲಿಸಲು, ಜೀವನ ಸುಲಭತೆಯನ್ನು ಹೆಚ್ಚಿಸಲು, ತೆರಿಗೆ ನೆಲೆಯನ್ನು ವಿಸ್ತರಿಸಲು, ಉತ್ಪಾದನೆಯನ್ನು ಬೆಂಬಲಿಸಲು, ಆದಾಯದ ಬೆಳವಣಿಗೆಯನ್ನು ಉತ್ತೇಜಿಸಲು, ಆರ್ಥಿಕ ಆವೇಗವನ್ನು ಉಳಿಸಿಕೊಳ್ಳಲು ಮತ್ತು ಸಾಮಾಜಿಕ ರಕ್ಷಣೆಯನ್ನು ಬಲಪಡಿಸಲು ಸುಧಾರಣೆಗಳನ್ನು ವಿನ್ಯಾಸಗೊಳಿಸಲಾಗಿದೆ. ಇದರೊಂದಿಗೆ, ಕೆಲವು ಧ್ದಪಡಿಸಿದ ಉತ್ಪನ್ನಗಳ ಮೇಲಿನ ಕಡಿಮೆ ಜಿಎಸ್‌ಟಿಯಿಂದ ಅವುಗಳ ಬೇಡಿಕೆಯನ್ನು ಹೆಚ್ಚಿಸುವ ಸಾಧ್ಯತೆಯಿದೆ. ಈ ಉತ್ಪನ್ನಗಳಲ್ಲಿ ಗಣನೀಯ ಪ್ರಮಾಣದಲ್ಲಿ ಎಂಎಸ್‌ಎಂಇಗಳು ತಯಾರಿಸುವುದರಿಂದ, ಈ ವ್ಯವಹಾರಗಳು ಬೇಡಿಕೆಯಲ್ಲಿ ಏರಿಕೆಯನ್ನು ಕಾಣುವ ಸಾಧ್ಯತೆಯಿದೆ&ಡಣಾಂಣ; ಎಂದು ಹೇಳಿದರು.

ಇದಕ್ಕೂ ಮೊದಲು ಸಮ್ಮೇಳನದ ನಿರ್ದೇಶಕ ಡಾ. ಬಸವರಾಜ ಎಂ.ಎಸ್ ಸ್ವಾಗತಿಸಿ, ಪ್ರಾಸ್ತಾವಿಕ ಭಾಷಣ ಮಾಡುತ್ತಾ, "ಜಗತ್ತಿನಲ್ಲಿ 160 ಕ್ಕೂ ಹೆಚ್ಚು ದೇಶಗಳು ಜಿಎಸ್‌ಟಿಯನ್ನು ಜಾರಿಗೆ ತಂದಿವೆ. 1950 ರಲ್ಲಿ ಇದನ್ನು ಜಾರಿಗೆ ತಂದ ಮೊದಲ ದೇಶ ಫ್ರಾನ್ಸ್. ಭಾರತವು ರಾಜ್ಯಗಳ ಒಕ್ಕೂಟವಾಗಿರುವುದರಿಂದ ಎಲ್ಲಾ ರಾಜ್ಯಗಳು ಮತ್ತು ಕೇಂದ್ರ ಸರಕಾರವನ್ನು ಅವುಗಳ ತೆರಿಗೆ ಅಧಿಕಾರಗಳ ಬಗ್ಗೆ ಮನವರಿಕೆ ಮಾಡಿಕೊಡುವುದು ಸವಾಲಿನ ಕೆಲಸವಾಗಿತ್ತು. ಆದ್ದರಿಂದ ಜಿಎಸ್‌ಟಿಯನ್ನು ಜಾರಿಗೆ ತರಲು ಹತ್ತು ವರ್ಷಗಳು ಬೇಕಾಯಿತು. ಇದು ತೆರಿಗೆ ಮೂಲವನ್ನು 60 ಲಕ್ಷ ತೆರಿಗೆ ಪಾವತಿದಾರರಿಂದ 1.20 ಕೋಟಿಗೆ ಹೆಚ್ಚಿಸಿದೆ ಮತ್ತು

ಸರಾಸರಿ ತೆರಿಗೆ ದರವನ್ನು 15.8 ರಿಂದ 11.3 ಪ್ರತಿಶತಕ್ಕೆ ಇಳಿಸಿದೆ" ಎಂದು ಹೇಳಿದರು.

ಧಾರವಾಡದ ಬಹುಶಿಸ್ತೀಯ ಸಂಶೋಧನಾ ಕೇಂದ್ರ (ಸಿಎಂಡಿಆರ್) ಪ್ರತಿನಿಧಿ ಡಾ. ಸಿದ್ದು ವಿ. ಹೊನಗೋಡಿಮಠ ಮತ್ತು ಸಿಯುಕೆಯ ಆರ್ಥಿಕ ಅಧ್ಯಯನ ಮತ್ತು ಯೋಜನಾ ವಿಭಾಗದ ಮುಖ್ಯಸ್ಥೆ ಡಾ. ಸುಮಾ ಸ್ಕೇರಿಯಾ ಅವರು ಈ ಸಂದರ್ಭದಲ್ಲಿ ಮಾತನಾಡಿದರು. ಈ ಸಂದರ್ಭದಲ್ಲಿ ಡಾ.ಗಣಪತಿ ಬಿ ಸಿನ್ನೂರ್, ಡಾ.ಎಂ.ಜೊಹೇರ್, ಡಾ.ಎಸ್.ಲಿಂಗಮೂರ್ತಿ, ಡಾ.ಶಿವಕುಮಾರ್ ಬೆಳ್ಳಿ, ಡಾ.ಸುಜಾತ್ ಎಸ್.ಕೆ, ಡಾ.ಜಿ.ಮಹೇಂದ್ರ, ಡಾ.ಶೈಲಜಾ ಕೊನೆಕ್, ಶರಣಬಸವ ವಿಶ್ವವಿದ್ಯಾಲಯ ಮತ್ತು ಸಿಯುಕೆಯ ಅಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮಹಾನಗರ ಪಾಲಿಕೆಯಿಂದ ಏಪ್ರಿಲ್ 1, 4, 5ರಂದು ಗಣತಿ ತರಬೇತಿ ಕಾರ್ಯಕ್ರಮ

**ರಾಯಚೂರು:** ರಾಯಚೂರು ಮಹಾನಗರ ಪಾಲಿಕೆ ವತಿಯಿಂದ ಗಣತಿದಾರರಿಗೆ ಹಾಗೂ ಮೇಲ್ವಿಚಾರಕರಿಗೆ ಗಣತಿ ತರಬೇತಿ ಕಾರ್ಯಕ್ರಮವನ್ನು ಏಪ್ರಿಲ್ 1, 4 ಹಾಗೂ 5ರಂದು ಹಮ್ಮಿಕೊಳ್ಳಲಾಗಿದೆ.ಏಪ್ರಿಲ್ 1 ಹಾಗೂ 4ರಂದು ಬೆಳಿಗ್ಗೆ 10ರಿಂದ 05:30 ರವರೆಗೆ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರ ಹಾಗೂ ಏಪ್ರಿಲ್ 5ರಂದು ಬೆಳಿಗ್ಗೆ 10ರಿಂದ 05:30ರವರೆಗೆ ನಗರದ ಸ್ಟೇಷನ್ ರೋಡ್ ರಸ್ತೆಯ ಬಾಲಕಿಯರ ಸರಕಾರಿ ಪದವಿಪೂರ್ವ ಕಾಲೇಜಿನಲ್ಲಿ ಗಣತಿ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ವಲಯ 2ರ ಚಾರ್ಜ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ: ಏಪ್ರಿಲ್ 1ರಂದು ಪೂರ್ವಭಾವಿ ಸಭೆ

**ರಾಯಚೂರು:** ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯ ಪೂರ್ವಭಾವಿ ಸಿದ್ಧತಾ ಸಭೆಯು ಏಪ್ರಿಲ್ 1ರ ಸಂಜೆ ಸಂಜೆ 4 ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ. ಸಂಬಂಧಿಸಿದ ಅಧಿಕಾರಿಗಳು ಮತ್ತು ಸಂಘ-ಸಂಸ್ಥೆಗಳ ಮುಖಂಡರು ಸಭೆಗೆ ಹಾಜರಾಗಿ ತಮ್ಮ ಸಲಹೆ ಸೂಚನೆಗಳನ್ನು ನೀಡಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಚಿತ ಕಾರ್ಮಿಕ ಸ್ಮಾರ್ಟ್ ಕಾರ್ಡ್ ವಿತರಣೆಯಲ್ಲಿ ಗೊಂದಲ: ಮಧ್ಯವರ್ತಿಗಳ ಹಸ್ತಕ್ಷೇಪಕ್ಕೆ ಕಾರ್ಮಿಕರ ಆಕ್ರೋಶ

**ಯಾದಗಿರಿ:ಮಾ.31:**ಅಸಂಘಟಿತ ಹಾಗೂ ಕಟ್ಟಡ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರ ಜಾರಿಗೆ ತಂದಿರುವ ಉಚಿತ ಸ್ಮಾರ್ಟ್ ಕಾರ್ಡ್ ಯೋಜನೆ ಜಿಲ್ಲೆಯಲ್ಲಿ ಗಂಭೀರ ವಿವಾದಕ್ಕೆ ಕಾರಣವಾಗಿದೆ. ನೇರವಾಗಿ ಕಾರ್ಮಿಕರಿಗೆ ತಲುಪಬೇಕಾದ ಸೌಲಭ್ಯಗಳು ಮಧ್ಯವರ್ತಿಗಳ ಮೂಲಕ ವಿತರಣೆ ಆಗುತ್ತಿರುವುದು ಹಾಗೂ ಅದಕ್ಕೆ ಹಣ ವಸೂಲಿ ನಡೆಯುತ್ತಿದೆ ಎಂಬ ಆರೋಪಗಳು ಕಾರ್ಮಿಕರ ಅಸಮಾಧಾನವನ್ನು ಉಂಟುಮಾಡಿವೆ.

ಟೈಲರಿಂಗ್, ಬೀಡಿ, ಮನೆ ಕೆಲಸ, ಆಟೋ ಚಾಲನೆ ಸೇರಿದಂತೆ ವಿವಿಧ ವೃತ್ತಿಗಳಲ್ಲಿ ತೊಡಗಿರುವ ಕಾರ್ಮಿಕರಿಗೆ ನೀಡಬೇಕಾದ ಸ್ಮಾರ್ಟ್ ಕಾರ್ಡ್‌ಗಳು, ಕಿಟ್‌ಗಳು ಹಾಗೂ ತರಬೇತಿ ಪ್ರಮಾಣಪತ್ರಗಳು ಬಹುಕಾಲದಿಂದ ಬಾಕಿ ಉಳಿದಿದ್ದು, ಇತ್ತೀಚೆಗೆ ಅವುಗಳನ್ನು ಸಂಘಟನೆಗಳ ಮೂಲಕ ಹಂಚಿಕೆ ಮಾಡಲು ಮುಂದಾಗಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಮೂಲತಃ ಉಚಿತವಾಗಿ ದೊರಕಬೇಕಾದ ಈ ಸೌಲಭ್ಯಗಳಿಗೆ "ಸೇವಾ ವೆಚ್ಚ" ಎಂಬ ಹೆಸರಿನಲ್ಲಿ ಹಣ ಕೇಳಲಾಗುತ್ತಿದೆ ಎಂಬ ಮಾತುಗಳು ವ್ಯಾಪಕವಾಗಿವೆ.

ನಗರದ ಚಿತ್ತಾಪುರ ರಸ್ತೆಯ ಜೈ ಭವಾನಿ ಕಾಂಪ್ಲೆಕ್ಸ್ ಬಳಿ, ಚಾಲುಕ್ಯ ಹೋಟೆಲ್ ಸಮೀಪದಲ್ಲಿರುವ 'ನೇರುವು ಕಟ್ಟಡ ಮತ್ತು ಅಸಂಘಟಿತ ಕಾರ್ಮಿಕರ ಸಂಘಟನೆ' ಕಚೇರಿಯಲ್ಲಿ ಕಾರ್ಡ್ ವಿತರಣೆ ನಡೆಯುತ್ತಿದ್ದು, ಇಲ್ಲಿ ಕಾರ್ಮಿಕರಿಂದ ಹಣ ವಸೂಲಿ ಮಾಡಲಾಗುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಕಾರ್ಡ್ಗೆ 50 ಹಾಗೂ ಕಿಟ್‌ಗಳಿಗೆ 100 ಸೇರಿ 150 ನೀಡಿದ ಬಳಿಕವೇ ಸೌಲಭ್ಯಗಳನ್ನು ನೀಡಲಾಗುತ್ತಿದೆ ಎನ್ನಲಾಗಿದ್ದು, ಹಣ ನೀಡದಿದ್ದರೆ ಕಾರ್ಡ್ ನೀಡುವುದಿಲ್ಲ ಎಂಬ ಸ್ಪಷ್ಟ ಮಾತುಗಳನ್ನು ಹೇಳಲಾಗುತ್ತಿದೆ ಎಂದು ಕಾರ್ಮಿಕರು ದೂರಿದ್ದಾರೆ.

ಜಿಲ್ಲೆಯ ವಿವಿಧ ವಿತರಣಾ ಕೇಂದ್ರಗಳಲ್ಲಿಯೂ ಇದೇ ರೀತಿಯ ದೂರುಗಳು ಕೇಳಿಬರುತ್ತಿದ್ದು, ಕಾರ್ಮಿಕರು ಕಾರ್ಡ್ ಪಡೆಯಲು ಹೋದಾಗ 50ರಿಂದ 150ರವರೆಗೆ ಹಣ ಕೇಳಲಾಗುತ್ತಿದೆ ಎನ್ನಲಾಗಿದೆ. ಹಣ ನೀಡದಿದ್ದರೆ ವಿತರಣೆಯಲ್ಲಿ ವಿಳಂಬ




ಅಥವಾ ನಿರಾಕರಣೆ ಎದುರಾಗುತ್ತಿದೆ ಎಂಬ ಆರೋಪಗಳು ಕೇಳಿಬಂದಿವೆ. ಇದರಿಂದ ಬಡ ಕಾರ್ಮಿಕರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳುತ್ತಿದ್ದು, ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ."ಇದೇ ಕಾರ್ಡ್ ಕೆಲವೆಡೆ ಉಚಿತವಾಗಿ ಸಿಗುತ್ತದೆ, ಆದರೆ ಇಲ್ಲಿ ಹಣ ಕೇಳುತ್ತಾರೆ" ಎಂದು ಕಾರ್ಮಿಕರು ಪ್ರಶ್ನಿಸಿದಾಗ, "ಸಂಘಟನೆಯ ನಿಯಮದಂತೆ ನಡೆಯುತ್ತಿದೆ" ಎಂಬ ಉತ್ತರ ನೀಡಲಾಗುತ್ತಿದೆ ಎನ್ನಲಾಗಿದೆ. ಈ ಹೇಳಿಕೆಗಳು ವಿತರಣಾ ವ್ಯವಸ್ಥೆಯ ಪಾರದರ್ಶಕತೆ ಕುರಿತಾಗಿ ಅನುಮಾನಗಳನ್ನು ಮತ್ತಷ್ಟು ಗಾಢಗೊಳಿಸಿವೆ.

ಈ ಕುರಿತು ಸಂಘಟನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭೀಮರಾಯ ಹತ್ತಿಕುಣಿ ಫೋನ್ ಮೂಲಕ ಪ್ರತಿಕ್ರಿಯೆ ನೀಡಿದ್ದು, "ಕಾರ್ಡ್ಗೆ 50 ಮತ್ತು ಕಿಟ್‌ಗೆ 100 ಸೇರಿ 150 ನಿಗದಿ ಮಾಡಲಾಗಿದೆ. ಇದು ಕಾರ್ಮಿಕ ಇಲಾಖೆ ಹಾಗೂ ಹೆಡ್ ಆಫೀಸ್ ಸೂಚನೆಯಂತೆ ನಡೆಯುತ್ತಿದೆ" ಎಂದು ತಿಳಿಸಿದ್ದಾರೆ ಎನ್ನಲಾಗಿದೆ. ಈ ಹೇಳಿಕೆಯೇ ಇದೀಗ ಇಲಾಖೆಯ ಪಾತ್ರದ ಮೇಲೆಯೇ ಪ್ರಶ್ನೆಗಳನ್ನು ಎಬ್ಬಿಸಿದೆ.

ಉಚಿತವಾಗಿ ದೊರಕಬೇಕಾದ ಸರ್ಕಾರಿ ಸೌಲಭ್ಯಗಳಿಗೆ ಹಣ ವಸೂಲಿ ಮಾಡುವುದು ಕಾನೂನುಬಾಹಿರವಾಗಿದ್ದು, ಇದರಿಂದ ಬಡ ಕಾರ್ಮಿಕರು ಸಂಕಷ್ಟಕ್ಕೆ ಸಿಲುಕುತ್ತಿರುವುದು ಸ್ಪಷ್ಟವಾಗಿದೆ. ದೀರ್ಘಕಾಲದಿಂದ ಕಾರ್ಡ್ಗಾಗಿ ಕಾಯುತ್ತಿದ್ದ ಕಾರ್ಮಿಕರಿಗೆ ಕೊನೆ ಹಂತದಲ್ಲಿ ಹಣ ಕೇಳುತ್ತಿರುವುದು ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ.
ಇನ್ನೊಂದೆಡೆ, ಸಂಘಟನೆಗಳ ಪ್ರತಿನಿಧಿಗಳು "ದಾಖಲೆ ಪರಿಶೀಲನೆ ಹಾಗೂ ವಿತರಣೆ ವ್ಯವಸ್ಥೆಗೆ ಆಗುವ ವೆಚ್ಚಕ್ಕಾಗಿ ಮಾತ್ರ ಈ ಮೊತ್ತ ಸಂಗ್ರಹಿಸಲಾಗುತ್ತಿದೆ" ಎಂದು ಸಮರ್ಥಿಸಿಕೊಳ್ಳುತ್ತಿದ್ದರೂ, ಇದು ಸರ್ಕಾರದ ಉಚಿತ ಯೋಜನೆಯ ಮೂಲ ಉದ್ದೇಶಕ್ಕೆ ವಿರುದ್ಧವಾಗಿದೆ ಎಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ.

ಈ ನಡುವೆ, ಕಾರ್ಮಿಕ ಇಲಾಖೆಯ ಮೇಲ್ವಿಚಾರಣೆ ಹಾಗೂ ಜವಾಬ್ದಾರಿತನ ಕುರಿತ ಪ್ರಶ್ನೆಗಳು ಗಂಭೀರವಾಗುತ್ತಿದ್ದು, ನೇರ ವಿತರಣೆಯ ಬದಲು ಮಧ್ಯವರ್ತಿಗಳ ಮೂಲಕ ಸೌಲಭ್ಯ ನೀಡುವ ಕ್ರಮವೇ ವಿವಾದದ ಕೇಂದ್ರಬಿಂದುವಾಗಿದೆ.
ಈ ಹಿನ್ನೆಲೆ, ಜಿಲ್ಲಾಡಳಿತ ತಕ್ಷಣ ಮಧ್ಯಪ್ರವೇಶಿಸಿ ಸಮಗ್ರ ತನಿಖೆ ನಡೆಸಬೇಕು. ಅಕ್ರಮ ಸಾಬೀತಾದಲ್ಲಿ ಸಂಬಂಧಿತವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಹಾಗೂ ಯಾವುದೇ ಶುಲ್ಕವಿಲ್ಲದೆ ನಿಜವಾದ ಪ್ರಯೋಜನಾರ್ಥಿಗಳಿಗೆ ಸೌಲಭ್ಯ ತಲುಪುವಂತೆ ಕ್ರಮ ವಹಿಸಬೇಕು ಎಂಬ ಒತ್ತಾಯ ಸಾರ್ವಜನಿಕ ವಲಯದಿಂದ ಕೇಳಿಬರುತ್ತಿದೆ.

# ಶರಣಪ್ಪ ಮಾನೇಗಾರರಿಗೆ 'ಕರ್ನಾಟಕ ಸಾರ್ವಭೌಮ ಪ್ರಶಸ್ತಿ' ಪ್ರದಾನ




**ಯಾದಗಿರಿ:ಮಾ.31:** ಸಮಾಜಮುಖಿ ಚಟುವಟಿಕೆಗಳ ಮೂಲಕ ಜನಮನ ಗೆದ್ದಿರುವ ಹಿಂದುಳಿದ ವರ್ಗಗಳ ಆಯೋಗದ ಮಾಜಿ ಸದಸ್ಯ ಶರಣಪ್ಪ ಡಿ. ಮಾನೇಗಾರ (ಯರಗೋಳ) ಅವರಿಗೆ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಪ್ರತಿಷ್ಠಿತ 'ಕರ್ನಾಟಕ ಸಾರ್ವಭೌಮ ಪ್ರಶಸ್ತಿ' ನೀಡಿ ಗೌರವಿಸಲಾಯಿತು.
ಬೆಂಗಳೂರು ನಗರದ ಪ್ರಖ್ಯಾತ ಪ್ರೆಸ್ಟೀಜ್ ಸಭಾಂಗಣದಲ್ಲಿ ನಡೆದ ಭವ್ಯ ಸಮಾರಂಭದಲ್ಲಿ, ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ಹಾಗೂ ಖ್ಯಾತ ನಟಿ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷೆ ಜಯಮಾಲಾ ಅವರು ಪ್ರಶಸ್ತಿಯನ್ನು ಪ್ರದಾನಿಸಿದರು.
ಸಮಾಜದ ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಶರಣಪ್ಪ ಮಾನೇಗಾರ ಅವರು ವರ್ಷಗಳಿಂದ ಸಲ್ಲಿಸುತ್ತಿರುವ ಸೇವೆ, ಜನಪರ ಚಿಂತನೆಗಳು ಹಾಗೂ ನಾಯಕತ್ವ ಗುಣಗಳನ್ನು ಮನಗಂಡು ಈ ಗೌರವ ನೀಡಲಾಗಿದೆ. ಅವರ ನಿರಂತರ ಸೇವಾಭಾವವು ಯುವಕರಿಗೆ ದಿಕ್ಕು ತೋರಿಸುವಂತದ್ದು ಎಂದು ಗಣ್ಯರು ಮೆಚ್ಚುಗೆ ವ್ಯಕ್ತಪಡಿಸಿದರು.
ಈ ಸಂದರ್ಭದಲ್ಲಿ ಮಾತನಾಡಿದ ಟಿ.ಎ. ನಾರಾಯಣಗೌಡ, "ಸಮಾಜದ ಅಭಿವೃದ್ಧಿಗೆ ಶ್ರಮಿಸುವ ವ್ಯಕ್ತಿಗಳನ್ನು ಗುರುತಿಸಿ ಗೌರವಿಸುವುದು ನಮ್ಮ ಕರ್ತವ್ಯ. ಶರಣಪ್ಪ ಮಾನೇಗಾರರಂತಹ ವ್ಯಕ್ತಿತ್ವಗಳು ಸಮಾಜಕ್ಕೆ ಪ್ರೇರಣೆಯ ದೀಪವಾಗಿವೆ," ಎಂದು ಹೇಳಿದರು.
ಕಾರ್ಯಕ್ರಮದಲ್ಲಿ ಕರವೇ ಯಾದಗಿರಿ ಜಿಲ್ಲಾಧ್ಯಕ್ಷ ಟಿ.ಎನ್. ಭೀಮುನಾಯಕ, ತಾಲ್ಲೂಕು ಅಧ್ಯಕ್ಷ ಮಲ್ಲು ಮಾಳಿಕೇರಿ, ಮಾಜಿ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಸುಧರ್ಶನ್ ಪಾಟೀಲ್ ಜೈಗ್ರಾಮ್, ಹಣಮಂತ ದೊಡ್ಡಮನಿ, ಜಗದೀಶ್ ಸಜ್ಜನ, ಯಂಕಾರೆಡ್ಡಿ ಮಾನೇಗಾರ, ಸೈದಾಪುರ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ಆಂಜನೇಯ ಕಟ್ಟಿಮನಿ, ವೀರೇಶ್ ಸಜ್ಜನ್, ಕೋಲಿ ಸಮಾಜದ ವಲಯ ಅಧ್ಯಕ್ಷ ರಮೇಶ್ ಭೀಮನಳ್ಳಿ, ಗುರುಮಿಠಕಲ್ ಕ್ಷೇತ್ರದ ಯುವ ಕಾಂಗ್ರೆಸ್ ಉಪಾಧ್ಯಕ್ಷ ಮಂಜುನಾಥ್ ಮೇತ್ರಿ, ಪುಂಡಲೀಕ್ ಗೊಂದೆಡಗಿ, ಜುಬೇರ ಕಡೇಚೂರು, ಹುಸೇನಪ್ಪ ಕಡೇಚೂರು, ಚಂದ್ರಪ್ಪ ಕಡೇಚೂರು, ರಾಘವೇಂದ್ರ ಕೊಂಕಲ್ ಸೇರಿದಂತೆ ಅನೇಕ ಮುಖಂಡರು, ಅಭಿಮಾನಿಗಳು ಮತ್ತು ಗಣ್ಯರು ಉಪಸ್ಥಿತರಿದ್ದರು.
ಈ ಗೌರವ ಸಮಾರಂಭವು ಕೇವಲ ಪ್ರಶಸ್ತಿ ಪ್ರದಾನಕ್ಕೆ ಸೀಮಿತವಾಗದೆ, ಸಮಾಜ ಸೇವೆಯ ಮಹತ್ವವನ್ನು ಮೆರೆಯುವ ವೇದಿಕೆಯಾಗಿದ್ದು, ಶರಣಪ್ಪ ಮಾನೇಗಾರರಂತಹ ಸೇವಾ ಮನೋಭಾವದ ವ್ಯಕ್ತಿಗಳಿಗೆ ಮತ್ತಷ್ಟು ಉತ್ಸಾಹ ತುಂಬುವ ಸಂದರ್ಭವಾಗಿ ಪರಿಣಮಿಸಿತು.

# ಶಿಕ್ಷಕನ ಮೇಲೆ ದುಷ್ಕರ್ಮಿಗಳಿಂದ ಮಾರಣಾಂತಿಕ ಹಲ್ಲೆ : 20 ಸಾವಿರ ರೂ. ದೋಚಿ ಪರಾರಿ



**ಅಫಜಲಪೂರ :ಮಾ.31:** ತಾಲೂಕಿನ ಚೌಡಾಪುರ ಗ್ರಾಮದಲ್ಲಿ ಮುಖ್ಯ ಶಿಕ್ಷಕನ ಮೇಲೆ ದುಷ್ಕರ್ಮಿಗಳು ಮಾರಣಾಂತಿಕ ಹಲ್ಲೆ ನಡೆಸಿ, ಜೀವ ಬೆದರಿಕೆ ಹಾಕಿ 20 ಸಾವಿರ ರೂಪಾಯಿ ನಗದು ದೋಚಿಕೊಂಡು ಪರಾರಿಯಾದ ಘಟನೆ ಭಾನುವಾರ ರಾತ್ರಿ ನಡೆದಿದೆ.
ಹಲ್ಲೆಗೆ ಒಳಗಾದ ಶಿಕ್ಷಕ ಲಕ್ಷ್ಮಣ ಜೋಗುರ ಅವರ ಪ್ರಕಾರ, ಭಾನುವಾರ ರಾತ್ರಿ ಸುಮಾರು 9:30 ಗಂಟೆ ಸುಮಾರಿಗೆ ಕೆಲವು ಯುವಕರು ಬರ್ತಡೇ ಪಾರ್ಟಿ ನಡೆಸಿ ಉಳಿದ ಕೇಕ್ ಅನ್ನು ಅವರ ಫ್ಯಾಮಿಲಿ ರೆಸ್ಟೋರೆಂಟ್ ಮುಂದೆ ತಂದು ಎಸೆಯಲು ಮುಂದಾಗಿದ್ದಾರೆ. ಈ ವೇಳೆ ಶಿಕ್ಷಕರ ಮಗ "ಇಲ್ಲಿ ಕಸ ಎಸೆಯಬೇಡಿ" ಎಂದು ತಡೆದಿದ್ದರಿಂದ ಆರೋಪಿಗಳು ಕೋಪಗೊಂಡಿದ್ದಾರೆ.
ಇದರಿಂದ ಉದ್ವಿಗ್ನಗೊಂಡ ದುಷ್ಕರ್ಮಿಗಳು ಮಾರಕಾಸ್ತ್ರಗಳು, ಕಲ್ಲುಗಳು ಹಾಗೂ ದೊಣ್ಣೆಗಳಿಂದ ಶಿಕ್ಷಕ ಲಕ್ಷ್ಮಣ ಜೋಗುರ ಮತ್ತು ಅವರ ಮಗನ ಮೇಲೆ ಭೀಕರವಾಗಿ ಹಲ್ಲೆ ನಡೆಸಿದ್ದಾರೆ. ಹಲ್ಲೆಯ ವೇಳೆ ಆರೋಪಿಗಳು ಜೀವ ಬೆದರಿಕೆ ಹಾಕಿ, ಅವರ ಬಳಿ ಇದ್ದ ಸುಮಾರು 20 ಸಾವಿರ ರೂ. ನಗದು ದೋಚಿಕೊಂಡು ಪರಾರಿಯಾಗಿದ್ದಾರೆ ಎಂದು ತಿಳಿದುಬಂದಿದೆ.
ಇನ್ನೂ, ಹಲ್ಲೆ ವೇಳೆ ಆರೋಪಿಗಳು ತಳವಾರರೂ ನೀವು ಮುಸರಿ ತೊಳೆಯುವದು ಬಿಟ್ಟು ಇಲ್ಲೇಕೆ ಬಂದು ಕೆಲಸ ಮಾಡ್ತಿದೀರಿ ಜೊತೆಗೆ ಇನ್ನಷ್ಟು ಅಸ್ಲಿಲ ಶಬ್ದಗಳು ಬಳಸಿ ಅವಾಚ್ಯವಾಗಿ ತಳವಾರ ಸಮುದಾಯವನ್ನು ಅವಹೇಳನ ಮಾಡುವ ರೀತಿಯಲ್ಲಿ ಜಾತಿ ನಿಂದನೆ ಮಾಡಿದ್ದಾರೆ ಎಂಬ ಆರೋಪವೂ ಕೇಳಿಬಂದಿದೆ.
ಗಂಭೀರವಾಗಿ ಗಾಯಗೊಂಡಿರುವ ಶಿಕ್ಷಕ ಮತ್ತು ಅವರ ಮಗನಿಗೆ ಚಿಕಿತ್ಸೆ ನೀಡಲಾಗುತ್ತಿದ್ದು, ಈ ಸಂಬಂಧ ಪೊಲೀಸ್ ಠಾಣೆಯಲ್ಲಿ ದೂರು ನೀಡಲಾಗಿದೆ. ದೂರು ನೀಡಿದ ನಂತರ ಪೊಲೀಸರು ಆರೋಪಿಗಳ ಪತ್ತೆಗೆ ಮುಂದಾಗಿದ್ದಾರೆ.ನಂತರ ಮಾತನಾಡಿದ ರಮೇಶ್ ಜಮಾದಾರ ಚೌಡಾಪುರದಲ್ಲಿ ಸಾಕಷ್ಟು ರಾಬರಿ ಹಾಗೂ ಹಪ್ತಾ ವಸೂಲಿ ದಂದೆ ಬಹಳಷ್ಟು ನಡೆಯುತ್ತಿದೆ,ರಾತ್ರಿಯಾದರೆ ಸಾಕು ಯಾರಿಗೂ ಪೊಲೀಸರ ಭಯ ಇಲ್ಲದಂತಾಗಿದೆ, ರಾತ್ರಿ ಹೊತ್ತು ಗಸ್ತು ತಿರುಗುವದನ್ನು ಪೊಲೀಸರು ಕೈಬಿಟ್ಟಿದ್ದಾರೆ ಇದರಿಂದ ಸಾರ್ವಜನಿಕರ ಮೇಲೆ ಹಲ್ಲೆ, ಜೀವಬೆದರಿಕೆ, ಕಳ್ಳತನದಂತ ಪ್ರಕರಣಗಳು ಜಾಸ್ತಿಯಾಗುತ್ತಿವೆ, ಪೊಲೀಸ್ ಇಲಾಖೆಯ ನಿರ್ಲಕ್ಷತನ ಇಲ್ಲಿ ಸಾಕಷ್ಟು ಎದ್ದು ಕಾಣುತ್ತಿದೆ ಕೂಡಲೇ ಪೊಲೀಸ್ ಇಲಾಖೆ ರಾತ್ರಿ ಗಸ್ತು ಕಾರ್ಯ ಹೆಚ್ಚಿಸಿ ಕಾನೂನು ಸುವ್ಯವಸ್ಥೆ ಕಾಪಾಡಬೇಕು ಹಾಗೂ ಹಲ್ಲೆ ಮಾಡಿದ ದುಷ್ಕರ್ಮಿಗಳನ್ನು ಕೂಡಲೇ ಭಂದಿಸಬೇಕು ಎಂದು ಆಗ್ರಹಿಸಿದರು.
ಗ್ರಾಮದಲ್ಲಿ ಈ ಘಟನೆ ಆತಂಕಕ್ಕೆ ಕಾರಣವಾಗಿದ್ದು, ಆರೋಪಿಗಳನ್ನು ತಕ್ಷಣ ಬಂಧಿಸಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

# ಪ್ರವಾದಿಯ ಅನುಸರಣೆ ಮಾತ್ರ ಅಲ್ಲಾಹನ ಸಾಮಿಪ್ಯ ಪಡೆಯಲು ಸಾಧ್ಯ: ನ್ಯಾಯವಾದಿ ಲಿಯಾಖತ್ ಫರೀದ್ ಉಸ್ತಾದ



**ಕಲಬುರಗಿ, ಮಾ.31–** ಸರ್ವ ಲೋಕಗಳ ಪ್ರಭು ಅಲ್ಲಾಹನ ಸಾಮಿಪ್ಯ ಮತ್ತು ಆತನ ಕೃಪೆಯನ್ನು ಸಂಪಾದಿಸಲು ಕರುಣಾಮಯಿ ಪ್ರವಾದಿ ಮೊಹ್ಮದ ಪೈಗಂಬರ ಅವರು, ತೋರಿಸಿದ ನೈಜ ಮಾರ್ಗದಲ್ಲಿ ಜೀವನ ಕ್ರಮಿಸುವುದಾಗಿದೆ ಎಂದು ಹೈಕೋರ್ಟಿನ ಹಿರಿಯ ನ್ಯಾಯವಾದಿ ಲಿಯಾಖತ ಫರೀದ ಉಸ್ತಾದ ಅವರು, ಹೇಳಿದರು.
ತಾರಪೈಲ್ ರಹಮತ್ ನಗರದ ದಾರುಲ್ ಝಿಕರ್ ಅಹ್ಮದಿಯಾ ಮುಸ್ಲೀಮ ಸಮಾಜದ ಸಭಾಂಗಣದಲ್ಲಿ ಮಾ.29ರಂದು ಆಯೋಜಿಸಿದ್ದ ಅಹ್ಮದಿಯಾ ಮುಸ್ಲೀಮ ಸಂಸ್ಥಾಪನ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಭೂ ಮಂಡಲದಲ್ಲಿರುವ ಬೆಟ್ಟುಗುಡ್ಡ ಮತ್ತು ಪರ್ವತಗಳಷ್ಟು ತಮ್ಮ ಸತ್ಕಾರಗಳಿದ್ದರೂ ಸಹ ಅಲ್ಲಾಹನನ್ನು ಸಂದಿಸಲು ಸಾಧ್ಯವಾಗುವುದಿಲ್ಲ ಅದು ಕೇವಲ ಪ್ರವಾದಿಯ ಅನುಕರಣೆಯಿಂದ ಮಾತ್ರ ಸಾದ್ಯವಾಗಲಿದೆ ಆ ಮೂಲಕವೇ ತಾವು ಅಲ್ಲಾಹನ ಸಮಿಪ್ಯ ಪಡೆಯಲು ಸಾಧ್ಯವಾಯಿತು ಎಂದು ಅಹ್ಮದಿಯಾ ಮುಸ್ಲೀಮ ಸಮಾಜದ ಸಂಸ್ಥಾಪಕರು ಮತ್ತು ಮಸೀಹ ಮೌವುದ್ ಹಾಗೂ ಕಲ್ಕಿಯ ಅವತಾರರಾದ ಹಜರತ ಮಿರ್ಜಾ ಗುಲಾಂ ಅಹ್ಮದ ಖಾದಿಯಾನಿ ಅವರು, ಪ್ರಕಟಿಸಿದ್ದನ್ನು ನಾವಿಲ್ಲಿ ಸ್ಮರಿಸಿಕೊಂಡು ಮೈಗೂಡಿಸಿಕೊಳ್ಳಬೇಕು ಎಂದರು.

ಪವಿತ್ರ ಕುರ್‌ಆನ್ ಮತ್ತು ಹದಿಸ್‌ಗಳಲ್ಲಿನ ಪ್ರಮುಖ ಭೋದನೆಗಳನ್ನೊಳಗೊಂಡ 10 ಷರತ್ತುಗಳನ್ನು ಸಿದ್ದಪಡಿಸಿರುವ ಸಂಸ್ಥಾಪಕರು, ತಮ್ಮೊಂದಿಗೆ ಮತ್ತು ಸಮಾಜದ ಖಲಿಫಾರೊಂದಿಗೆ ನಿಷ್ಠೆಯ ದಿಕ್ಷೆ ಪಡೆಯಲು ಈ 10 ಷರತ್ತುಗಳನ್ನು ಯಾವುದೇ ಕಾರಣಕ್ಕೂ ಉಲ್ಲಂಘಿಸದೇ ಚಾಚು ತಪ್ಪದೇ ಅನುಸರಣೆ ಮಾಡುವುದಾಗಿ ಅಹ್ಮದಿಯರು ಆಯಾ ಕಾಲಘಟ್ಟದ ಇಮಾಮರೊಂದಿಗೆ ಪ್ರತಿಜ್ಞೆ ಮಾಡುತ್ತಾರೆ ಎಂದರು.

ಮುಖ್ಯ ಅತಿಥಿಗಳಾಗಿ ಅಗಮಿಸಿದ್ದ ಡಾ. ಅಬ್ದುಲ ರಬ್ ಉಸ್ತಾದ ಅವರು, ಮಾತನಾಡಿ ಅಂತ್ಯಕಾಲ ಕಲಿಯುಗದಲ್ಲಿ ಧರ್ಮಾಚರಣೆ ಕೇವಲ ಆಚರ ವಿಚಾರಕ್ಕೆ ಸಿಮೀತಗೊಂಡು ನೈಜ ದೇವಭಕ್ತಿ ಆಕಾಶದ ಕೊನೆಯ ಸ್ಥಾನದಲ್ಲಿರುವ ಕೃತಿಕ ನಕ್ಷತ್ರದಷ್ಟು ದೂರಗೊಂಡಾಗ ಈ ಕಾಲಘಟ್ಟದಲ್ಲಿ ಪುನಃ ದೇವಭಕ್ತಿಯನ್ನು ಸಮಾಜದಲ್ಲಿ ಸ್ಥಾಪಿಸಲು ಫಾರಸಿ ಮೂಲದ ವ್ಯಕ್ತಿಯೊಬ್ಬರು ಇಮಾಮ್ ಮಹದಿ ಮತ್ತು ಮಸೀಹ ಮೌವೂದರಾಗಿ ಅವತರಿಸುವರು ಎಂದು ಪ್ರವಾದಿ ಮೊಹ್ಮದ ಪೈಗಂಬರ ಅವರು, ನುಡಿದ ಭವಿಷ್ಯವಾಣಿಯಂತೆ ಹಜರತ ಮಿರ್ಜಾ ಗುಲಾಂ ಅಹ್ಮದ ಖಾಗಿಯಾನಿ ಅವರು, ಅವತರಿಸಿ ಅಲ್ಲಾಹನ ಆದೇಶದ ಮೇರೆಗೆ 1889 ಮಾರ್ಚ 23 ರಂದು ಅಹ್ಮದಿಯಾ ಮುಸ್ಲೀಮ ಸಮುದಾಯಕ್ಕೆ ಅಡಿಪಾಯ ಹಾಕಿದರು ಮತ್ತು ಇಸ್ಲಾಂ ಧರ್ಮಕ್ಕೆ ಪುರನುಜ್ಜೀವನ ನೀಡುವ ಮೂಲಕ ಭಕ್ತರಿಗೆ ಅಲ್ಲಾಹನ ಸಮಿಪ್ಯ ಪಡೆಯಲು ಮಾರ್ಗದರ್ಶನ ನೀಡಿದ್ದಾರೆ ಎಂದರು.

ಮೊಹ್ಮದ ವಸೀಮ ಅಹ್ಮದ ನೂರ, ಅಬ್ದುಲ್ ಸಜ್ಜಿ, ಮೊಹ್ಮದ ಅಬ್ದುಲ್ಲಾ ಉಸ್ತಾದ, ಮೈನುದ್ದೀನ ಮುನ್ನಳ್ಳಿ ಅವರು, ಇಮಾಮ್ ಮಹದಿ ಮತ್ತು ಮಸೀಹ ಮೌವುದ್ ಅವರು ಕುರಿತು ಮಾತನಾಡಿದರು, ಮೊಹ್ಮದ ಇಸ್ಮಾಯಿಲ್ ತಿಮ್ಮಾಪೂರಿ, ಐಯಾನ್ ಅಹ್ಮದ ಯಾದಗಿರ, ಡಾ.ಅಬ್ದುಲ ರಶೀದ್ ಉಸ್ತಾದ ಅವರು, ಭಕ್ತಿ ನಜಂ ಗೀತೆಯನ್ನು ಹಾಡಿದರು, ಪವಿತ್ರ ಕುರ್‌ಆನ್ ಪಠಣದೊಂದಿಗೆ ಪ್ರಾರಂಬವಾದ ಈ ಕಾರ್ಯಕ್ರಮ ಕೊನೆಯಲ್ಲಿ ಅಹ್ಮದಿಯಾ ಸಮಾಜದ ಜಿಲ್ಲಾಧ್ಯಕ್ಷ ಅಮೀರ ಜಮಾತ್ ಲಿಯಾಖತ್ ಫರೀದ್ ಉಸ್ತಾದ ಅವರು, ಮೌನ ಪ್ರಾರ್ಥನೆಯ ಮೂಲಕ ಸಮಾರೋಪ ಗೊಂಡಿತು..

# ಹತ್ತಿ ಮಾರಾಟದಲ್ಲಿ 20 ಲಕ್ಷ ವಂಚನೆ ಪರಾರಿ



**ಜೇವರ್ಗಿ:ಮಾ.31:** ಹತ್ತಿ ಮಾರಾಟದಲ್ಲಿ ಮ್ಯಾನೇಜರ್ ತನ್ನ ಮಾಲೀಕನಿಗೆ 20 ಲಕ್ಷ ವಂಚಿಸಿರುವ ಕುರಿತು ಜೇವರ್ಗಿ ಪೊಲೀಸ್ ಠಾಣೆಯಲ್ಲಿ ಮಾರ್ಚ್ 26ರಂದು ಪ್ರಕರಣ ದಾಖಲಾಗಿದೆ.
ಜೇವರ್ಗಿ ತಾಲ್ಲೂಕಿನ ಸೋಮನಾಥಹಳ್ಳಿ ಗ್ರಾಮದ ಬಸವರಾಜ ವಿರೂಪಾಕ್ಷಪ್ಪ ಪಾಟೀಲ, ಅವರ ಪತ್ನಿ ನಿರ್ಮಲಾ ಹಾಗೂ ಸೊಸೆ ಸಂಗೀತಾ ಮಾಲೀಕತ್ವದ ಶಿವಪಾರ್ವತಿ ಹೆಸರಿನ ಕಾಟನ್ ಜಿನ್ನಿಂಗ್ ಫ್ಯಾಕ್ಟರಿ ಚಿಗರಳ್ಳಿ ಕಳೆದ ವರ್ಷದ ಇದರಲ್ಲಿ ಸೆಪ್ಟೆಂಬರ್‌ನಿಂದ ಮ್ಯಾನೇಜರ್ ಆಗಿ ಕೆಲಸ ಮಾಡುತ್ತಿದ್ದ ಗುಜರಾತ್‌ನ ಮಹೇಂದ್ರಕುಮಾರ ಜಲಾರಿಯಾ ಮಾ.19ರಂದು 30 ಲಕ್ಷ ಬೆಲೆಬಾಳುವ 120 ಕಾಟನ್ ಬೆಗಳನ್ನು (ಬೀಜದಿಂದ ಬೇರ್ಪಡಿಸಿದ ಹತ್ತಿ) ಕೇವಲ 10 ಲಕ್ಷಕ್ಕೆ ಮಾರಿದ್ದಾಗಿ ಬಸವರಾಜ ದೂರು ನೀಡಿದ್ದಾರೆ. ಯಾರಿಗೆ ಮಾರಿದ್ದಾಗಿ ಕೇಳಿದರೂ ಹೇಳದೇ ಮ್ಯಾನೇಜರ್ ನಂಬಿಕೆ ದ್ರೋಹ ಮಾಡಿದ್ದಾರೆ ಎಂದು ಅವರುದೂರಿನಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಶಾಲೆ ಮುಚ್ಚಲು ಬಿಡುವುದಿಲ್ಲ ಮದಿರೆ, ಕೋಳೂರು ಗ್ರಾಮಸ್ಥರು



**ಬಳ್ಳಾರಿ, ಮಾ.31**: ಎಐಡಿಎಸ್ ನೇತೃತ್ವದಲ್ಲಿ ಬಳ್ಳಾರಿ ಜಿಲ್ಲೆಯ ಕುರುಗೋಡು ತಾಲೂಕಿನ ಮದಿರೆ ಮತ್ತು ಕೋಳೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು ಮತ್ತು ಉರ್ದು ಕಿರಿಯ ಪ್ರಾಥಮಿಕ ಶಾಲೆಗಳನ್ನು ಮುಚ್ಚಿ ಕೋಳೋರು ಪ್ರೌಢಶಾಲೆಗೆ ಮ್ಯಾಗ್ನೆಟ್ ಮಾಡುವುದನ್ನು ವಿರೋಧಿಸಿ ಎರಡು ಗ್ರಾಮಗಳ ವಿದ್ಯಾರ್ಥಿಗಳು ಮತ್ತು ಪೋಷಕರು ಹಾಗೂ ಗ್ರಾಮಸ್ಥರು ಕೆ ಪಿ ಎಸ್ ಮ್ಯಾಗ್ನೆಟ್ ಯೋಜನೆಯ ಅಡಿಯಲ್ಲಿ 40,000ಕ್ಕೂ ಅಧಿಕ ಸರ್ಕಾರಿ ಶಾಲೆಗಳನ್ನು ಮುಚ್ಚಲು ಹೊರಟಿರುವ ಸರ್ಕಾರದ ನೀತಿಯ ವಿರುದ್ಧ ಪ್ರತಿಭಟನೆ ಮಾಡಿ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಎಐಡಿಎಸ್ ಜಿಲ್ಲಾ ಉಪಾಧ್ಯಕ್ಷರು ಶಾಂತಿ ಮಾತನಾಡಿ, ಸಾವಿತ್ರಿಬಾಯಿ- ಜ್ಯೋತಿಬಾ ಫುಲೆಯವರ ಹೋರಾಟ ಮತ್ತು ಪರಿಶ್ರಮದ ಫಲವಾಗಿ ಇಂದು ಹಳ್ಳಿಗಳಿಗೆ ಸರ್ಕಾರಿ ಶಾಲೆಗಳು ಆರಂಭವಾಗಿವೆ. ಈ ಎಲ್ಲರ ಮಹಾತ್ಮರ ಆಶಯಗಳನ್ನು ಗಾಳಿಗೆ ತೂರಿ ಶಾಲೆಗಳನ್ನು ಮುಚ್ಚಲಾಗುತ್ತಿದೆ" ಎಂದು ಆಕ್ರೋಶ ವ್ಯಕ್ತಪಡಿಸಿದರು. ಎಐಡಿಎಸ್ ಜಿಲ್ಲಾ ಕಾರ್ಯದರ್ಶಿ ಕಂಬಳಿ ಮಂಜುನಾಥ್ ಅವರು ಮಾತನಾಡುತ್ತಾ ರಾಜ್ಯದಾದ್ಯಂತ ಈ ಯೋಜನೆ ವಿರುದ್ದ ಜನ ಆಕ್ರೋಶ ಇದ್ದರೂ, ಕಿಂಚಿತ್ತು ಬೆಲೆ ಇಲ್ಲದೆ ಈ ಭಾಗದ ಜನಗಳ ಅನುಕೂಲಕ್ಕೆ ಇರುವಂತ ಏಏಖಆಃ ನಿಧಿಯನ್ನು ಶಾಲೆಗಳನ್ನು ಮುಚ್ಚಲು ಬಳಸಿಕೊಳ್ಳುತ್ತಿರುವುದು ಅತ್ಯಂತ ಜನ ವಿರೋಧಿ ನೀತಿಯಾಗಿದೆ ಎಂದು ಅವರು ಕಟುವಾಗಿ ಟೀಕಿಸಿದರು.

ಕೆ.ಕೆ.ಆರ್.ಡಿ.ಬಿ ಕಾರ್ಮಿಕ ಸಂಘಟನೆಯ ಜಿಲ್ಲಾ ಮುಖಂಡರಾದ ಪ್ರಮೋದ್ ಅವರು ಮಾತನಾಡುತ್ತಾ 6ನೇ ತರಗತಿಯಿಂದಲೇ ಕೆಪಿಎಸ್ ಶಾಲೆಯಲ್ಲಿ ಟೈಲರಿಂಗ್ ಮಾಡುವುದು, ಅಡಿಕೆ ಸುಲಿಯುವುದು ಸೇರಿದಂತೆ ಇತರೆ ಕಸುಬುಗಳನ್ನು ಕಲಿಸುವುದಾಗಿ ಸರ್ಕಾರ ಹೇಳಿದೆ. ಸಮಾಜದ ತಳಸಮುದಾಯದ ಮಕ್ಕಳ ವಿದ್ಯೆ ಕಸಿದು ಕೂಲಿಗೆ ಕಳಿಸುವ ಸರ್ಕಾರದ ಹುನ್ನಾರವನ್ನು ನಾವು ಒಪ್ಪುವುದಿಲ್ಲ. ಈ ಯೋಜನೆ ರದ್ದಾಗವವರೆಗೂ ನಿರಂತರವಾಗಿ ಹೋರಾಟ ನಡೆಸುತ್ತೇವೆ" ಎಂದು ಕರ್ನಾಟಕ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ರೈತರು-ಕಾರ್ಮಿಕರು-ದಿನಗೂಲಿ ಕೆಲಸ ಮಾಡುವವರು ತಮ್ಮ ಮಕ್ಕಳನ್ನು ಊರಿನಲ್ಲೇ ಸರ್ಕಾರಿ ಶಾಲೆ ಇರುವುದರಿಂದ ಮಕ್ಕಳನ್ನು ನೆಮ್ಮದಿಯಿಂದ ಶಾಲೆಗಳಿಗೆ ಕಳುಹಿಸಲಾಗುತ್ತಿದೆ, ಊರಿನಲ್ಲಿರುವ ಸರ್ಕಾರಿ ಶಾಲೆ ಮುಚ್ಚಿದರೆ 3ಕೀ.ಮೀ ರಿಂದ 5 ಕೀ.ಮೀ ದೂರ ಇರುವ ಶಾಲೆಗೆ ನಮ್ಮ ಮಕ್ಕಳನ್ನು ಕಳುಹಿಸಲು ಸಾಧ್ಯವಿಲ್ಲ ದೂರದಲ್ಲಿರುವ ಕೆಪಿಎಸ್ ಶಾಲೆಗೆ ಮಕ್ಕಳನ್ನು ಹೇಗೆ ಕಳಿಸುವುದು ದಾರಿಯಲ್ಲಿ ಭಾರಿ ಪ್ರಮಾಣದಲ್ಲಿ ಲಾರಿ,ಬಸ್ಸು ಗಳ ಓಡಾಟ ಇರುತ್ತದೆ ಎಂದು ಪೋಷಕರು ಆತಂಕ ವ್ಯಕ್ತಪಡಿಸಿದರು

ಈ ಕೂಡಲೇ ರಾಜ್ಯ ಸರ್ಕಾರ ಎಚ್ಚೆತ್ತು ಕೊಂಡು ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಅಡಿಯಲ್ಲಿ ಸರ್ಕಾರಿ ಶಾಲೆಗಳ ಮುಚ್ಚುವುದು ಕೈಬಿಡಬೇಕೆಂದು ಅವರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಎಐಯುಟಿಯುಸಿ ಕಾರ್ಮಿಕ ಸಂಘಟನೆಯ ಮುಖಂಡರಾದ , ಜಿ ಸುರೇಶ್, ಎಐಕೆಕೆಎಂಎಸ್ ರೈತ ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ರಾಜ , ಜಿಲ್ಲಾಧ್ಯಕ್ಷರು ಗೋವಿಂದ್, ಎಐಡಿವೈಓ ಯುವಜನ ಸಂಘಟನೆ ಜಿಲ್ಲಾ ಕಾರ್ಯದರ್ಶಿ ಜಗದೀಶ್, ಎಐಎಂಎಸ್ ಮಹಿಳಾ ಸಂಘಟನೆ ಜಿಲ್ಲಾ ಸಮಿತಿಯ ಸದಸ್ಯರಾದ, ವಿದ್ಯಾ ಮತ್ತು ಎಐಎಸ್‌ಸಿ ಜಿಲ್ಲಾ ಮುಖಂಡರಾದ ನಾಗರತ್ನ ಹಾಗೂ ಗ್ರಾಮಸ್ಥರಾದ , ನಾಗರಾಜ್, ಎನ್ ಕೆಂಚ ಮಾಳಪ್ಪ, ದೊಡ್ಡಬಸಪ್ಪ ಡಿ.ಕೆ. ಗಾದಿಲಿಂಗಪ್ಪ, ಹುಲಿಗೆಮ್ಮ, ಲಕ್ಷ್ಮಿ, ಪಾಲ್ಗೊಂಡಿದ್ದರು.

# ಕ್ಷೇತ್ರದಲ್ಲಿ ಶಿಕ್ಷಣ ನೀರಾವರಿ ವಿದ್ಯುತ್ ಆರೋಗ್ಯ- ಮೂಲ ಸೌಕರ್ಯಗಳ ಅಭಿವೃದ್ಧಿಗೆ ಆದ್ಯತೆ : ಶಾಸಕ ಲಕ್ಷ್ಮಣ ಸವದಿ

**ಅಥಣಿ :ಮಾ.31:** ಗ್ರಾಮೀಣ ಹಾಗೂ ನಗರ ಪ್ರದೇಶಗಳ ಸರ್ವತೋಮುಖ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು, ಜನರ ಸಮಸ್ಯೆಗಳನ್ನು ಹತ್ತಿರದಿಂದ ಅರಿತು ಅವುಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವುದು ನಮ್ಮ ಗುರಿಯಾಗಿದೆ. ಜನರ ವಿಶ್ವಾಸಕ್ಕೆ ತಕ್ಕಂತೆ ಕೆಲಸ ಮಾಡುವ ಸಂಕಲ್ಪದೊಂದಿಗೆ, ಎಲ್ಲ ವರ್ಗದ ಜನತೆಗೆ ಮೂಲಭೂತ ಸೌಲಭ್ಯಗಳನ್ನು ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುವದಾಗಿ ಶಾಸಕ ಲಕ್ಷ್ಮಣ ಸವದಿ ಹೇಳಿದರು

ಅಥಣಿ ತಾಲೂಕಿನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯಮಂತ್ರಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಯೋಜನೆಯಡಿ 6.85 ಕೋಟಿ ರೂ.ಗಳ ಕಾಮಗಾರಿಗಳಾದ ಅಬ್ಬಿಹಾಳ ರಸ್ತೆ ಸುಧಾರಣೆಗೆ 3.60 ಕೋಟಿ, ದರೂರ ಖವಟಕೊಪ್ಪ ರಸ್ತೆ ಕಾಮಗಾರಿಗೆ 3 ಕೋಟಿ ಮತ್ತು ದರೂರ ಗ್ರಾಮದ ಬನ್ನಿವಾರಿ ತೋಟದ ವಸತಿಗೆ ನಿರಂತರ ವಿದ್ಯುತ್ ಯೋಜನೆಗೆ 25 ಲಕ್ಷ ರೂ.ಗಳ ಕಾಮಗಾರಿಗಳಿಗೆ ಸೋಮವಾರ ಶಾಸಕ ಲಕ್ಷ್ಮಣ ಸವದಿ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು ಅವರು ಮುಂದಿನ 25 ವರ್ಷಗಳ ಅವಧಿಗೆ ಬೇಕಾಗುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಯೋಜನೆಗಳನ್ನು ರೂಪಿಸಲಾಗಿದ್ದು, ಅಥಣಿ ತಾಲೂಕಿನ ಸವದಿ, ಯಲ್ಲಡಗಿ, ಸಂಕೋನಟ್ಟಿ, ಪಾರ್ಥನಹಳ್ಳಿ ಹತ್ತಿರ ಮತ್ತು ತೆಲಸಂಗ ಗ್ರಾಮಗಳಲ್ಲಿ 110 ಕಿಲೋ ವ್ಯಾಟ್ ಸ್ಟೇಶನ್ ಗಳು ಮಂಜೂರಾಗಿದ್ದು, ಈಗಾಗಲೇ ಯಲ್ಲಡಗಿ ಗ್ರಾಮದಲ್ಲಿ 110 ಕಿಲೋ ವ್ಯಾಟ್ ಸ್ಟೇಶನ್ ಕಾಮಗಾರಿ ಪ್ರಾರಂಭವಾಗಿದ್ದು, ಈ ಎಲ್ಲ ಸ್ಟೇಶಗಳ ಪೂರ್ಣಗೊಳ್ಳುವುದರಿಂದ ವಿದ್ಯುತ್ ಸಮಸ್ಯೆ ಶಾಶ್ವತವಾಗಿ ಪರಿಹಾರಗೊಳ್ಳಲಿದೆ.

ಅಂದಾಜು 3 ಲಕ್ಷ 50 ಸಾವಿರ ಎಕರೆಗೆ ಮತ್ತು 25 ಲಕ್ಷ ಜನ-ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸುವ ಹಿಪ್ಪರಗಿ ಆಣೆಕಟ್ಟಿನ ಗೇಟ್ ಕಿತ್ತು ಹೋದ ಪರಿಣಾಮ ಸುಮಾರು 3 ಟಿ.ಎಂ.ಸಿ ನೀರು ಹರಿದು ಹೋಗಿತ್ತು ಹೀಗಾಗಿ ಬೇಸಿಗೆಯಲ್ಲಿ ನೀರಿನ ಕೊರತೆಂಯಾಗುತ್ತದೆ ಎಂದು ಎಲ್ಲರೂ ಆತಂಕಕ್ಕೀಡಾಗಿದ್ದರು ಆದರೆ ಸದ್ಯದ ಸ್ಥಿತಿ ಗಮನಿಸಿದಲ್ಲಿ ನೀರಿನ ಕೊರತೆ ಉಂಟಾಗುವುದಿಲ್ಲ, ಯಾರೂ ಅತಂಕ ಪಡುವ ಅವಶ್ಯಕತೆ ಇಲ್ಲ ಎಂದು ಹೇಳಿದರು.

ಈ ಸಂದರ್ಭದಲ್ಲಿ ಹೆಸ್ಕಾಂ ಅಧಿಕಾರಿಗಳಾದ ಗುರುರಾಜ ಸಂಪಣ್ಣವರ, ಎಸ್.ಎ. ಪಾರ್ಥನಹಳ್ಳಿ, ಎಮ್.ಎಸ್.ಅವಟಿ,



ಲೋಕೋಪಯೋಗಿ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ ಮಗದುಮ್, ಗುತ್ತಿಗೆದಾರರಾದ ರಾಜು ಆಲಬಾಳ, ಅರ್ಜುನ ನಾಯಿಕ, ಅಮೀರ ಖತೀಬ್, ಶಿವರುದ್ರ ಘೂಳಪ್ಪನವರ, ಮುಖಂಡರಾದ ವಿನಾಯಕ ಬಾಗಡಿ. ಸುರೇಶ ಮಾಯಣ್ಣವರ. ಶೇಖರ ಕನಕರೆಡ್ಡಿ. ಮಲ್ಲಿಕಾರ್ಜುನ ದಳವಾಯಿ, ಶಿವು ಆಸಂಗಿ, ರಾಜು ಮರಡಿ, ಶಿವಾನಂದ ನಾಯಿಕ, ಶಿವಪುತ್ರ ನಾಯಿಕ, ಮಹಾಂತೇಶ ಐಗಳಿಮಠ, ಪುಟ್ಟು ಶಿಂಧೆ, ಸುರೇಶ ಮಾಯಣ್ಣವರ, ವಿನಾಯಕ ಬಾಗಡಿ, ನಾಥಗೌಡ ಪಾಟೀಲ,ಅಣ್ಣಪ್ಪ ಚೌಗಲಾ, ಜಗದೀಶ ದಳವಾಯಿ,ಬಾಳಪ್ಪ ಗುಮತಾಜ, ಮಲ್ಲಿಕಾರ್ಜುನ ದಳವಾಯಿ, ಸೇರಿದಂತೆಸೇರಿದಂತೆ ಹಲವು ಗಣ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.ಅನೇಕರು ಉಪಸ್ಥಿತರಿದ್ದರು.

ಅಥಣಿಯು ಶೈಕ್ಷಣಿಕ ಇತಿಹಾಸದಲ್ಲಿ ಇದೊಂದು ಮೈಲಿಗಲ್ಲು ಆಗಲಿದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಜೆಟ್‌ನಲ್ಲಿ ಅಥಣಿ ಕೃಷಿ ಕಾಲೇಜಿಗೆ 508 ಕೋಟಿ ರೂ. ಮಂಜೂರಾತಿ ನೀಡಿದ್ದಾರೆ. ಕೊಟ್ಟಲಗಿ ಅಮ್ಮಾಜೇಶ್ವರಿ ಯೋಜನೆ ಉದ್ಘಾಟನೆಗೆ ಮುಖ್ಯಮಂತ್ರಿಗಳು ಆಗಮಿಸಿದಾಗ ಕೃಷಿ ಕಾಲೇಜು ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಿದ್ದಾರೆ. ಅಥಣಿ ಪಟ್ಟಣವನ್ನು ತಂತಿ ಮುಕ್ತ ಮಾಡಲಾಗುವುದು. ಯುಜಿಡಿ ಮಾಡಲಿಕ್ಕೆ 440 ಕೋಟಿ ರೂಗಳ ಪ್ರಸ್ತಾವನೆ ಕೊಟ್ಟಿದ್ದೇನೆ. ರೈತರಿಗೆ ಬೇಡಿದಾಗ ನೀರು ಬೇಡಿದಾಗ ಕರೆಂಟ್ ಕೊಟ್ಟರೆ ಆಧುನಿಕ ಕೃಷಿ ಮಾಡಲು ಸಾಧ್ಯ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕಾಗಿ ಅನುಕೂಲ ಆಗುವ ನಿಟ್ಟಿನಲ್ಲಿ ತೋಟದ ವಸತಿಗಳಿಗೆ 24 ಗಂಟೆ ವಿದ್ಯುತ್ ನೀಡುವ ನಿರಂತರ ಜೊತಿ ಯೋಜನೆಗೆ ಚಾಲನೆ ನೀಡಲಾಗಿದೆ

– ಲಕ್ಷ್ಮಣ ಸವದಿ. ಶಾಸಕರು

# ಮಹಾವೀರ ಜಯಂತಿ ಆಚರಣೆ

**ನವಲಗುಂದ,ಮಾ31** : ಪಟ್ಟಣದಲ್ಲಿರುವ ಭಗವಾನ್ ಶ್ರೀ ಆದಿನಾಥ ದಿಗಂಬರ ಜೈನ ಮಂದಿರದಲ್ಲಿ ಹಾಗೂ ತಾಲ್ಲೂಕು ಆಡಳಿತದಿಂದ ತಹಶೀಲ್ದಾರ ಕಚೇರಿಯಲ್ಲಿ ಭಗವಾನ್ 1008 ಮಹಾವೀರ್ ತೀರ್ಥಂಕರರ ಜನ್ಮದಿನ ಆಚರಿಸಲಾಯಿತು.

ಜೈನ ಮಂದಿರದಲ್ಲಿ ಶಾಸಕ ಎನ್ ಎಚ್ ಕೋನರಡ್ಡಿ ಭಾಗವಹಿಸಿ ಮಾತನಾಡಿ 'ಎರಡೂವರೆ ಸಾವಿರ ವರ್ಷಗಳ ಇತಿಹಾಸವಿರುವ ಜೈನ ಧರ್ಮದ ವಿಚಾರಗಳು ಸಮಾಜಕ್ಕೆ ಮುಟ್ಟುವಂತಾಗಬೇಕು. ಜೈನ ಧರ್ಮದಲ್ಲಿ ಮಹಾವೀರ, ಭರತ ಸೇರಿದಂತೆ ನೂರಾರು ಮಹಾಪುರುಷರು ಹುಟ್ಟಿ ಸಮಾಜಕ್ಕೆ ಉತ್ತಮ ವಿಚಾರಗಳನ್ನು ಸಾರಿದ್ದಾರೆ. ಅವು ಕೃತಿ, ಗ್ರಂಥ, ಓಲೆಗರಿಗಳಿಗೆ ಸೀಮಿತವಾಗದೆ ಪುಸ್ತಕ ರೂಪದಲ್ಲಿ ಬಂದು ಮಕ್ಕಳು ಓದುವಂತಾಗಬೇಕು ಎಂದರು

ಜೈನ್ ಸಮಾಜದ ತಾಲ್ಲೂಕು ಅಧ್ಯಕ್ಷ ವಿದ್ಯಾಧರ ಪಾಟೀಲ ಮಾತನಾಡಿ ಶಾಂತಿಯ ಸಂದೇಶ ಸಾರಿದ ಭಗವಾನ್ ಮಹಾವೀರರ ಆದರ್ಶ, ತತ್ವಗಳು ಸರ್ವಕಾಲಕ್ಕೂ ಪ್ರಸ್ತುತ ಎಂದರು. ಇದಕ್ಕೂ ಮೊದಲು ಪಟ್ಟಣದಲ್ಲಿ ಮಹಾವೀರರ ಮೂರ್ತಿಯ ಭವ್ಯ ಮೆರವಣಿಗೆ ನಡೆಯಿತು.

ತಹಶೀಲ್ದಾರ ಸುಧೀರ ಸಾಹುಕಾರ, ತಾ ಪಂ ಇಒ ಪಿ ಆರ್ ಬಡೇಖಾನಾವರ, ಮುಖ್ಯಾಧಿಕಾರಿ ಎಸ್ ಪಿ ಪೂಜಾರ, ಸಮಾಜದ



ಹಿರಿಯರಾದ ವಿಜಯನಗೌಡ ಪಾಟೀಲ, ಮರಿಗೌಡರು ಪಾಟೀಲ, ಮನೋಹರ ಪಾಟೀಲ, ಅಶೋಕ ಪಾಟೀಲ, ಸೋಮನಗೌಡ್ರು ಪಾಟೀಲ, ಶಾಂತಿನಾಥ್ ಪಾಟೀಲ, ಸುಕುಮಾರ ಪಾಟೀಲ, ಸಂತೋಷ ಪಾಟೀಲ, ಗಿರೀಶ ಪಾಟೀಲ, ಬಿಪಿನ್ ಪಾಟೀಲ, ರವಿ ಪಾಟೀಲ, ಜಿನ್ನಪ್ಪ ಹನಸಿ, ಹನುಮಂತಗೌಡ ಪಾಟೀಲ, ಶಾಮನಗೌಡ ಪಾಟೀಲ, ಭರಮಪ್ಪ ಹನಸಿ, ಸೋಮು ಪಾಟೀಲ, ಲತಾ ಪಾಟೀಲ, ಇಂದ್ರವ ಹನಸಿ , ಸುಶೀಲಾ ಹನಸಿ, ಶಂಕ್ರವ್ವ ಹನಸಿ, ಕೌಶಲ್ಯ ರಂಗೋಲಿ, ತ್ರಿಶಲಾ ಪಾಟೀಲ , ಸುರೇಖಾ ಪಾಟೀಲ , ಭಾರತಿ ಪಾಟೀಲ , ಪದ್ಮಾವತಿ ಪಾಟೀಲ, ಲತಾ ಪಾಟೀಲ, ಇಂದ್ರವ ಹನ್ಸಿ, ಸುಶೀಲಾ ಹನಸಿ, ಶಂಕ್ರವ್ವ ಹನಸಿ, ಕೌಶಲ್ಯ ರಂಗೋಲಿ ಹಾಗೂ ಸಮಸ್ತ ಶ್ರಾವಕ ಶ್ರಾವಕಿಯರು ಇದ್ದರು.

# ವ್ಯಸನ ಮುಕ್ತರಾಗಿ: ಬಿ.ಕೆ.ಶಿವಲೀಲಾ ಅಕ್ಕ



**ಕಲಬುರಗಿ,ಮಾ.31**–ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯ ಹಾಗೂ ಕೇಂದ್ರ ಕಾರಾಗೃಹ ವತಿಯಿಂದ ಬಂದಿಗಳಿಗೆ ನಶಮುಕ್ತ ಭಾರತ ಅಭಿಯಾನದ ಅಡಿಯಲ್ಲಿ ಮನ ಪರಿವರ್ತನೆಗಾಗಿ ಆರೋಗ್ಯ ಜೀವನಕ್ಕಾಗಿ ಒಂದು ತಾಸಿನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮಕ್ಕೆ ಬಿಕೆ ಶಿವಲೀಲಾ ಅಕ್ಕನವರು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಾ ಮಾನವ ಜನ್ಮ ಶ್ರೇಷ್ಠವಾದ ಜನ್ಮ ನಮ್ಮ ಸಂಸ್ಕೃತಿ ಪರಂಪರೆ ಅತ್ಯಂತ ಶ್ರೇಷ್ಠವಾದದ್ದು ಅಲ್ಲವೇ ದಯೆ ಕರುಣೆ ಮಮತೆ ಹಾಗೂ ಶಾಂತಿ ಮಂತ್ರಗಳು ಪ್ರತಿಯೊಬ್ಬ ಭಾರತೀಯ ರಲ್ಲಿ ತುಂಬಿರಬೇಕು ಇಂದಿನ ಯುವ ಪೀಳಿಗೆ ವ್ಯಸನಿಗಳಾಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುವಲ್ಲದೆ ಆರ್ಥಿಕವಾಗಿ ದುರ್ಬಲರಾಗಿ ತಮ್ಮ ಜೊತೆ ಕುಟುಂಬವನ್ನು ಕೂಡ ಸಾಲದ ಸುಳಿಯಲ್ಲಿ ಸಿಲುಕಿಸಿ ಜನ್ಮವನ್ನು ನರಕದ ಕಡೆಗೆ ಕೊಂಡಯ್ಯುತ್ತೀರಿ ಅದಕ್ಕಾಗಿ ಯುವ ಪೀಳಿಗೆಯ ಎಲ್ಲಾ ದುಶ್ಚಟಗಳಿಂದ ಮುಕ್ತರಾಗಿ ಒಳ್ಳೆಯ

ವ್ಯಕ್ತಿಯಾಗಿ ಸಮಾಜ ಮತ್ತು ಕುಟುಂಬಕ್ಕೆ ಜವಾಬ್ದಾರಿತ ವ್ಯಕ್ತಿಯಾಗಿ ಹೊರ ಹೋ ಮ್ಮಿ ದೇಶದ ಅಭಿವೃದ್ಧಿಗೆ ಕೈ ಜೋಡಿಸಬೇಕಾಗಿ ಕರೆ ನೀಡಿದರ ಇನ್ನೋರ್ವ ಅತಿಥಿಗಳಾಗಿ ಆಗಮಿಸಿದ ಬಿಕೆ ರಾಜೇಶ್ವರಿ ಅಕ್ಕನವರು

ಮಾತನಾಡುತ್ತಾ ಎಲ್ಲರಿಗೂ ವ್ಯಸನ ಮುಕ್ತ ಭಾರತ ಮಾಡುವಲ್ಲಿ ಒಂದು ಪ್ರತಿಜ್ಞೆಯನ್ನು ಬೋಧಿಸಿ ನಂತರ ಮಾತನಾಡುತ್ತಾ ಆಚರಣೆಯಲ್ಲಿ ಸರಳತೆ ವಿಚಾರಣೆಯಲ್ಲಿ ದಿವ್ಯತೆ ಕರ್ಮದಲ್ಲಿ ಶ್ರೇಷ್ಠತೆಯ ಸಾರ್ಥಕ ಜೀವನವನ್ನು ಪರಿವಾರ ಮತ್ತು ಸಮಾಜದಲ್ಲಿ ನಮ್ಮ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬೇಕು ಹಾಗೂ ನಶ ಮುಕ್ತ ಭಾರತ ಮತ್ತು ಸದೃಢ ಭಾರತಕ್ಕೆ ಕೈಜೋಡಿಸಬೇಕಾಗಿ ಎಂದು ಕರೆ ನೀಡಿದರು.

ಈ ಸಂಸ್ಥೆಯ ಅಧೀಕ್ಷಕರಾದ ರಾಕೇಶ್ ಕಾಂಬಳೆ ರವರು ಮಾತನಾಡುತ್ತಾ ಮಾದಕ ವ್ಯಸನವು ಕೇವಲ ವ್ಯಕ್ತಿ ಆರೋಗ್ಯವನ್ನು ಹಾಳುಮಾಡುವುದಲ್ಲದೆ ಕುಟುಂಬಗಳ ನಾಶಪಡಿಸುತ್ತದೆ ಮತ್ತು ಸಮಾಜ ದಲ್ಲಿ ಅಪರಾಧಗಳನ್ನು ಹೆಚ್ಚಿಸುತ್ತದೆ ಯುವಜನರು ದೇಶದ ಆಸ್ತಿ ಅವರು ವ್ಯಸನಕ್ಕೆ ಬಲಿ ಯಾದರೆ ದೇಶದ ಪ್ರಗತಿ ಕುಂಠಿತವಾಗುತ್ತದೆ ಆದ್ದರಿಂದ ನಶ ಮುಕ್ತ ಭಾರತವು ಅಭಿವೃದ್ಧಿ ಹೊಂದಿದ ಭಾರತದ ಕನಸಿಗೆ ಅಗತ್ಯ ವಾಗಿದೆ

ಈಗಾಗಲೇ ನಾವು ಕಾರಾಗೃಹದಲ್ಲಿ ನಿಷೇಧಿತ ವಸ್ತುಗಳ ಬಳಕೆಯನ್ನು ಸಂಪೂರ್ಣವಾಗಿ ನಿಲ್ಲಿಸಲಾಗಿದೆ ತಾವುಗಳು ಈಗಾಗಲೇ ಇದಕ್ಕೆ ಕೈಜೋಡಿಸಿ ಒಳ್ಳೆಯ ವ್ಯಕ್ತಿತ್ವವನ್ನು ಗುರುತಿಸಿಕೊಂಡು ಆದಷ್ಟು ಬೇಗ ನಿನ್ನ ಬಿಡುಗಡೆ ಹೊಂದಿ ಉತ್ತಮ ನಾಗರಿಕರಾಗಿ ಬಾಳಿ ಎಂದು ಕರೆ ನೀಡಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಈ ಸಂಸ್ಥೆಯ ಮುಖ್ಯಸ್ಥರಾದ ಕೆ ಸುರೇಶ್ ರವರು ಮಾತನಾಡುತ್ತಾ ನಶಮುಕ್ತ ಭಾರತ ಅಭಿಯಾನವು ಕೇವಲ ಸರ್ಕಾರದ ಜವಾಬ್ದಾರಿ ಅಲ್ಲ ಬದಲಿಗೆ ಪ್ರತಿಯೊಬ್ಬ

ನಾಗರಿಕನ ಕರ್ತವ್ಯವಾಗಿದೆ ಕುಟುಂಬ ಶಾಲೆ ಮತ್ತು ಸಮಾಜ ಒಗ್ಗೂಡಿ ಕೆಲಸ ಮಾಡಬೇಕಾಗಿದೆ ಈ ಅಭಿಯಾನವು ದೇಶಾದ್ಯಂತ ಮಾದಕ ವ್ಯಸನದ ಅಪಾಯಗಳ ಬಗ್ಗೆ ಜಾಗೃತಿ ಮೂಡಿಸುವ ಮತ್ತು ವ್ಯಸನ ಮುಕ್ತ

ಸಮುದಾಯ ನಿರ್ಮಿಸುವ ಗುರಿಯನ್ನು ಹೊಂದಿದೆ ಈ ನಿಟ್ಟಿನಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯ ಈ ಕೆಲಸದಲ್ಲಿ ಕೈಜೋಡಿಸಿದೆ ಕಲ್ಬುರ್ಗಿ ಜಿಲ್ಲೆ ಆದಂತ ಪ್ರತಿ ಗ್ರಾಮಕ್ಕೆ ತೆರಳಿ ಜಾಗೃತಿ ಮೂಡಿಸುವ ಕಾರ್ಯ ನಿರಂತರವಾಗಿ ಮಾಡುತ್ತಿರುವುದಕ್ಕೆ ಮತ್ತು ಕಾರಾಗೃಹದಲ್ಲಿ ಬಂದು ಕಾರ್ಯಕ್ರಮ ಹಮ್ಮಿ ಕೊಂಡಿದ್ದಕ್ಕಾಗಿ ಇಲಾಖೆ ವತಿಯಿಂದ ತುಂಬು ಹೃದಯದ ಅಭಿನಂದನೆ ಸಲ್ಲಿಸಿದರು. ವ್ಯಸನ ಮುಕ್ತ ಸಮಾಜ ಸುಂದರ ಭವಿಷ್ಯದ ಆಧಾರ ನಶೆಯನ್ನು ತ್ಯಜಿಸಿ ಬದುಕನ್ನ ಪ್ರೀತಿಸಿ ಮತ್ತು ಈ ಸಂಸ್ಥೆಯಲ್ಲಿ ನೀಡಲಾಗುತ್ತಿರುವ ವಿವಿಧ ಕೌಶಲ್ಯಾಧಾರಿತ ತರಬೇತಿಗಳು ಸತ್ಸಂಗ ಗ್ರಂಥಾಲಯ ಹಾಗೂ ಶಿಕ್ಷಣ ಇವುಗಳ ಸದುಪಯೋಗವನ್ನು ಪಡೆದುಕೊಂಡು ಬಿಡುಗಡೆ ಹೊಂದಿದ ಮೇಲೆ ಹೊಸ ಜೀವನವನ್ನು ನಡೆಸುವದಕ್ಕೆ ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಕುಂಭಕರ್ಣನ ಎದ್ದೇಳುವ ಒಂದು 10 ನಿಮಿಷಗಳ ವಿಡಿಯೋ ಪ್ರದರ್ಶಿಸಲಾಯಿತು.ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಸಹಾಯಕ ಅಧೀಕ್ಷಕರಾದ ಚನ್ನಪ್ಪ ಯಾಟಗಲ್, ಜಗದೀಶ್ ಪಾಟೀಲ್ ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

ಸ್ವಾಗತ ಕಾರ್ಯಕ್ರಮವನ್ನು ಭೀಮಾಶಂಕರ ಡಾಂಗೆ ಸಹಾಯಕ ಆಡಳಿತ ಅಧಿಕಾರಿಗಳು ನಡೆಸಿಕೊಟ್ಟರು. ಈ ಸಂಸ್ಥೆಯ ಶಿಕ್ಷಕರಾದ ನಾಗರಾಜ್ ಮೂಲಗೆ ಕಾರ್ಯಕ್ರಮವನ್ನು ನಿರೂಪಿಸಿದರು ಹಾಗೂ ವಂದನಾರ್ಪಣೆ

ಯನ್ನು ಬಿಕೆ ಶರಣಬಸಪ್ಪ ಹೀರಾ ಅವರು ನೆರವೇರಿಸಿದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE